ವಿಜಯಪುರ | ಸಂಪುಟ 01 | ಸಂಚಿಕೆ 302 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಶನಿವಾರ, ಜನವರಿ 27, 2024

"ಇಂಡಿ ನಗರವನ್ನು ಜಿಲ್ಲಾ ಕೇಂದ್ರವನ್ನಾಗಿ ಮಾಡಿಯೇ ಮುಂದಿನ ವಿಧಾನಸಭೆಯ ಚುನಾವಣೆ ಎದುರಿಸುತ್ತೇನೆ. ಜಿಲ್ಲೆ ಮಾಡದಿದ್ದರೆ ರಾಜಕೀಯ ನಿವೃತ್ತಿ ಹೊಂದುತ್ತೇನೆ. ನಾನು ಯಾವತ್ತಿಗೂ ಬದ್ಧತೆಯ ರಾಜಕಾರಣ ಮಾಡುತ್ತೇನೆ."



– ಯಶವಂತರಾಯಗೌಡ ಪಾಟೀಲ
ಶಾಸಕರು, ಇಂಡಿ

ವಿವಿಧ ಕಂಪನಿಗಳಿಂದ ಬಂಡವಾಳ ಹೂಡಿಕೆ | ವಿವಿಧ ಕೈಗಾರಿಕೆಗಳ ಸ್ಥಾಪನೆ | ಐದು ಸಾವಿರ ಉದ್ಯೋಗ ಸೃಷ್ಟಿ

# ವಿಜಯಪುರದಲ್ಲಿ ರೂ.300ಕೋಟಿ ವೆಚ್ಚದ ಸಂಸ್ಕರಣ ಘಟಕ

## ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಮಾಹಿತಿ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲೆಯಲ್ಲಿ ವಿದೇಶಿ ಸೇರಿದಂತೆ ವಿವಿಧ ಕಂಪನಿಗಳು ಬಂಡವಾಳ ಹೂಡಲು ಮುಂದಾಗಿದ್ದು, ಜಿಲ್ಲೆಯಲ್ಲಿ ವಿವಿಧ ಕೈಗಾರಿಕೆಗಳ ಸ್ಥಾಪನೆಯಿಂದಾಗಿ ಐದು ಸಾವಿರಕ್ಕೂ ಹೆಚ್ಚು ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರು ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದರು.

ಅವರು ಜಿಲ್ಲಾಡಳಿತದ ವತಿಯಿಂದ ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜ.26ರಂದು ಹಮ್ಮಿಕೊಂಡಿದ್ದ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿ, ಗಣರಾಜ್ಯೋತ್ಸವ ಸಂದೇಶ ನೀಡಿದ ಅವರು, ವಿಜಯಪುರದಲ್ಲಿ ವಿವಿಧ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು ಮುಂದೆ ಬಂದಿದ್ದು, ಈ ಪೈಕಿ ಲುಲು ಕಂಪನಿ ವಿಜಯಪುರದಲ್ಲಿ 300 ಕೋಟಿ ರೂ. ವೆಚ್ಚದಲ್ಲಿ ಹಣ್ಣು ಮತ್ತು ತರಕಾರಿ ಸಂಸ್ಕರಣ ಘಟಕವನ್ನು ತೆರೆಯಲು ಒಪ್ಪಿಕೊಂಡಿದೆ ಎಂದು ಹೇಳಿದರು.



ಉತ್ತರಪ್ರದೇಶ ಮೂಲದ ಬಿ.ಎಲ್. ಆಗ್ರೋ ಕಂಪನಿ ಕೂಡ ನಮ್ಮ ಜಿಲ್ಲೆಯಲ್ಲೇ ತನ್ನ ಆಹಾರ ಸಂಸ್ಕರಣಾ ಘಟಕವನ್ನು ಆರಂಭಿಸಲು ಮುಂದೆ ಬಂದಿದೆ. ಇದರಿಂದ ಬಂಡವಾಳ ಹೂಡಿಕೆಯಾಗಿ ಉದ್ಯೋಗ ಸೇರಿದಂತೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಇದರಿಂದ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಹೆಚ್ಚೆಚ್ಚು ಉದ್ಯೋಗಗಳು ಸೃಷ್ಟಿಯಾಗಲಿದ್ದು, ಇದಕ್ಕೆ ಪೂರಕವಾಗಿ ನಮ್ಮ ಜಿಲ್ಲೆಯು ಕೈಗಾರಿಕೆಗಳ ಬೆಳವಣಿಗೆಯನ್ನೂ ಸಾಧಿಸಬೇಕು. 21ನೇ ಶತಮಾನದ ಜಾಗತಿಕ ಸ್ಪರ್ಧೆಯಲ್ಲಿ ನಾವು ಉಳಿದುಕೊಳ್ಳಬೇಕು ಎಂದರೆ ಇದು ಅನಿವಾರ್ಯವಾಗಿದೆ. ಏಕೆಂದರೆ, ಇದರಿಂದ ಕೃಷಿ ಕ್ಷೇತ್ರದ ಮೇಲಿನ ಅತಿಯಾದ ಅವಲಂಬನೆ ಕಡಿಮೆಯಾಗಿ, ಉದ್ಯೋಗ ಸೃಷ್ಟಿ ಸಾಧ್ಯವಾಗಲಿದೆ. ಇದನ್ನು ಗಮನದಲ್ಲಿಟ್ಟುಕೊಂಡು, ನಾವು ಹೆಜ್ಜೆ ಇಡುತ್ತಿದ್ದೇವೆ. ಇದರ ಪರಿಣಾಮವಾಗಿ ಪ್ರಸಕ್ತ ಸಾಲಿನಲ್ಲಿ 1,452 ಕೈಗಾರಿಕೆಗಳು ಜಿಲ್ಲೆಯಲ್ಲಿ 122 ಕೋಟಿ ರೂ.ಗಳಿಗೂ ಹೆಚ್ಚು ಬಂಡವಾಳ ಹೂಡಿದ್ದು, 14,520 ಉದ್ಯೋಗಗಳು ಇದರಿಂದ ಸೃಷ್ಟಿಯಾಗಿವೆ ಎಂದು ಹೇಳಿದರು.

ನನ್ನ ನೇತೃತ್ವದ ನಿಯೋಗವು 2023ರ ಸೆಪ್ಟೆಂಬರ್–ಅಕ್ಟೋಬರ್ ತಿಂಗಳಲ್ಲಿ ಅಮೆರಿಕಕ್ಕೆ ತೆರಳಿ, ಜಾಗತಿಕ ಮಟ್ಟದ ಹಲವು ಕಂಪನಿಗಳೊಂದಿಗೆ ಮಹತ್ವದ ಮಾತುಕತೆಗಳನ್ನು ನಡೆಸಿದೆ. ಇದರಿಂದಾಗಿ ಕರ್ನಾಟಕಕ್ಕೆ 24 ಸಾವಿರ ಕೋಟಿ ರೂ. ಆದಾಯ ಹರಿದು ಬರುವುದು ನಿಚ್ಚಳವಾಗಿದೆ. ಇದರಲ್ಲಿ 8500 ಕೋಟಿ ಬಂಡವಾಳ ಹೂಡಲು ಕಂಪನಿಗಳು ಈಗಾಗಲೆ ಕಾರ್ಯಾರಂಭ ಮಾಡಿವೆ.

ನಾನು ಸಚಿವನಾಗಿ ಅಧಿಕಾರ ವಹಿಸಿಕೊಂಡ ಕಳೆದ ಎಂಟು ತಿಂಗಳಲ್ಲಿ ವಿಜಯಪುರ ಜಿಲ್ಲೆಯ ಅಭಿವೃದ್ಧಿಯು ವೇಗವನ್ನು ಪಡೆದುಕೊಂಡಿದೆ. ಮುಖ್ಯವಾಗಿ, ಇಲ್ಲಿ ನಿರ್ಮಿಸಲಾಗುತ್ತಿರುವ ಸುಸಜ್ಜಿತ ವಿಮಾನ ನಿಲ್ದಾಣದ ಕಾಮಗಾರಿಗಳು ಮುಕ್ತಾಯದ ಹಂತಕ್ಕೆ ಬಂದಿದ್ದು, ಇದರ ಉದ್ಘಾಟನೆಯು ಇನ್ನು ಕೆಲವೇ ತಿಂಗಳುಗಳಲ್ಲಿ ನಡೆಯಲಿದೆ. ಈ ವಿಮಾನ ನಿಲ್ದಾಣವು ಕಿತ್ತೂರು ಮತ್ತು ಕಲ್ಯಾಣ ಕರ್ನಾಟಕಗಳ ಅಭಿವೃದ್ಧಿಗೆ ಹೊಸ ಮುನ್ನುಡಿ ಬರೆಯಲಿದೆ. ಇದರಿಂದ ಈ ಭಾಗದ ರೈತರು ದ್ರಾಕ್ಷಿ ಸೇರಿದಂತೆ ತಮ್ಮ ಹಲವು ಬೆಳೆಗಳನ್ನು ದೇಶದ ನಾನಾ ಭಾಗಗಳಿಗೆ ರವಾನಿಸಲು ಇದು ಹೆಬ್ಬಾಗಿಲಾಗಲಿದೆ. ಜೊತೆಗೆ ಜಿಲ್ಲೆಯ ಶೈಕ್ಷಣಿಕ, ಕೈಗಾರಿಕಾ ಮತ್ತು ಆರ್ಥಿಕ ಪ್ರಗತಿಗಳಿಗೆ ಈ ವಿಮಾನ ನಿಲ್ದಾಣವು ಸೋಪಾನವಾಗಲಿದೆ ಎನ್ನುವುದರಲ್ಲಿ ಯಾವ ಸಂಶಯವೂ ಇಲ್ಲ ಎಂದು ಹೇಳಿದರು.

ಈ ವರ್ಷ ಎಲ್ಲೆಡೆಯೂ ಬರಗಾಲವಿದೆ. ಇದಕ್ಕೆ ನಮ್ಮ ಜಿಲ್ಲೆಯೇನೂ ಹೊರತಲ್ಲ. ಹೀಗಾಗಿ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಲಾಗಿದ್ದು, ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನಗಳನ್ನು ಕೊಡಲಾಗಿದೆ. ಇದಲ್ಲದೆ, ಜಾನುವಾರುಗಳಿಗೆ ಮೇವು ಪೂರೈಕೆ, ಉದ್ಯೋಗ ಖಾತ್ರಿ, ಪರಿಹಾರ ವಿತರಣೆ ಇತ್ಯಾದಿಗಳಿಗೂ ಆದ್ಯತೆ ಕೊಡಲಾಗಿದೆ. ಬ್ರಿಟಿಷರ ಕಾಲದಿಂದಲೂ ಬರಗಾಲಕ್ಕೆ ತುತ್ತಾಗಿದ್ದ ವಿಜಯಪುರ ಜಿಲ್ಲೆಯಲ್ಲಿ ಮಳೆ ಬೀಳುವ ಪ್ರಮಾಣ ಸರಾಸರಿಗಿಂತ ಕಡಿಮೆ ಇತ್ತು. 4 ವರ್ಷಗಳಲ್ಲಿ ಒಂದು ವರ್ಷ ಮಾತ್ರ ಉತ್ತಮ ಮಳೆ, ಉಳಿದ 3 ವರ್ಷಗಳು ಕಡಿಮೆ ಪ್ರಮಾಣದ ಮಳೆ ಕಾರಣ ಇಲ್ಲಿ ಸತತ ಬರಗಾಲದಿಂದ ಕೃಷಿಯನ್ನೆ ನಂಬಿರುವ ಜನತೆ ಅನಿವಾರ್ಯವಾಗಿ ಬದುಕು ಕಟ್ಟಿಕೊಳ್ಳಲು ಗುಳೆ ಹೋಗುವ ಪ್ರಮಾಣ ಹೆಚ್ಚಿತ್ತು. ಜಿಲ್ಲೆಯ ಬರಗಾಲ ನಿವಾರಣೆಗಾಗಿ ಈ ಹಿಂದೆ ನಾನು ಜಲಸಂಪನ್ಮೂಲ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವನಾಗಿ 2013–18ರ ಅವಧಿಯಲ್ಲಿ ವಿಜಯಪುರ ಜಿಲ್ಲೆಗೆ, ಸದ್ಬಳಕೆಗೆ 100 ಟಿ.ಎಂ.ಸಿ ನೀರು ನಿಗದಿಪಡಿಸಿ, ಕೃಷ್ಣಾ ನ್ಯಾಧೀಕರಣದ ಅಂತಿಮ ಅಧಿಸೂಚನೆ ಮುಂಚೆಯೇ ಅಗತ್ಯ ಕ್ರಮಗಳನ್ನು ಜರುಗಿಸಿ, ತಾತ್ಕಾಲಿಕವಾಗಿ ನೀರು ಅವಕಾಶ ಮಾಡಲಾಗಿದೆ ಎಂದು ಹೇಳಿದರು.

ಮುಳವಾಡ, ಚಿಮ್ಮಲಗಿ, ತುಬಚಿ–ಬಬಲೇಶ್ವರ ಸೇರಿದಂತೆ 10 ವಿವಿಧ ಯೋಜನೆಗಳ ಕಾಮಗಾರಿಗಳನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸಿ, ಮುಖ್ಯ ಕಾಲುವೆಗಳಿಗೆ ನೀರು ಹರಿಸಿ, ಕೆರೆಗಳನ್ನು ತುಂಬಿಸಿದ್ದರಿಂದ ಜಿಲ್ಲೆಯ ಜನತೆಗೆ ಸದ್ಯ ಬರಗಾಲದಲ್ಲಿಯೂ ನೆಮ್ಮದಿಯಿಂದ ಇದ್ದು, ಇಂದು ಗುಳೆಯ ಪ್ರಮಾಣ ಗಣನೀಯವಾಗಿ ಕುಸಿದಿದೆ. ಗುಳೆ ಹೋದವರು ಮರಳಿ ತಮ್ಮ ಗ್ರಾಮಗಳಲ್ಲಿ ವ್ಯವಸಾಯ ಆರಂಭಿಸಿದ್ದಾರೆ. ಸತತ ಬರಗಾಲ ಜಿಲ್ಲೆ ವಿಜಯಪುರ ಇದೀಗ ಹಸಿರುಮಯ ಜಿಲ್ಲೆಯಾಗಿ ಮಾರ್ಪಡಿಸಿದ ಹೆಮ್ಮೆ ಇದೆ ಎಂದರು.

ಹಾಗೆಯೇ, ಕಳೆದ ವಾರ ಸ್ವಿಟ್ಜರ್ಲೆಂಡ್ ದೇಶದ ದಾವೋಸ್‌ನಗರದಲ್ಲಿ ನಡೆದ ವಿಶ್ವ ಆರ್ಥಿಕ ಸಮಾವೇಶದಲ್ಲಿ ಕೂಡ ನಾನು ರಾಜ್ಯ ಸರಕಾರದ ಉನ್ನತ ನಿಯೋಗದ ನೇತೃತ್ವವನ್ನು ವಹಿಸಿ ಪಾಲ್ಗೊಂಡಿದ್ದೆ. ಇಲ್ಲೂ ಕೂಡ ಜಗತ್ತಿನ ಪ್ರಮುಖ ಕಂಪನಿಗಳಾದ ಎಚ್.ಪಿ., ಲುಲು, ನೆಸ್ಲೆ, ಬಿಎಲ್ ಆಗ್ರೋ, ಎಚ್.ಸಿ.ಎಲ್, ಮುಂತಾದ ಕಂಪನಿಗಳೊಂದಿಗೆ ಮಾತುಕತೆ ನಡೆಸುವ ಮೂಲಕ ರಾಜ್ಯಕ್ಕೆ 22 ಸಾವಿರ ಕೋಟಿ ರೂ.ಗಳಿಗೂ ಹೆಚ್ಚಿನ ಬಂಡವಾಳ ಬರುವುದನ್ನು ಖಾತ್ರಿ ಪಡಿಸಿಕೊಳ್ಳಲಾಗಿದೆ. ಹಾಗೆಯೇ, ಜಿಲ್ಲೆಯಲ್ಲಿ 3,239 ಎಕರೆ ವಿಸ್ತೀರ್ಣದಲ್ಲಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲಾಗಿದೆ. ಈ ಪೈಕಿ ಕೊಲ್ಹಾರ ತಾಲ್ಲೂಕಿನಲ್ಲಿ 245 ಕೋಟಿ ರೂ. ವೆಚ್ಚದಲ್ಲಿ 614 ಎಕರೆ ಇಂಡಸ್ಟ್ರಿಯಲ್ ಏರಿಯಾವನ್ನು ಸಜ್ಜುಗೊಳಿಸಲಾಗಿದೆ. ಇಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಗೆ 411 ನಿವೇಶನಗಳು ಲಭ್ಯವಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ, ವಿಧಾನ ಪರಿಷತ್ತಿನ ಮಾಜಿ ಸದಸ್ಯ ಅರುಣ್ ಶಹಾಪೂರ, ಮೇಯರ್ ಮಹೇಜಬಿನ ಹೊರ್ತಿ, ಉಪ ಮೇಯರ್ ದಿನೇಶ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಎಸ್.ಪಿ ಋಷಿಕೇಶ ಸೋನಾವಣೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಜಿಲ್ಲಾ ಮಟ್ಟದ ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

## ವಿಜಯಪುರ ಜಿಲ್ಲೆಯ ಸಮಗ್ರ ಅಭಿವೃದ್ಧಿ ಯೋಜನೆ



ವಿಜಯಪುರದ ಪಾರಂಪರಿಕ ಸ್ಥಳಗಳು ರಕ್ಷಣೆ, ಪ್ರವಾಸಿ ಸ್ಥಾನಗಳಾಗಿ ಅಭಿವೃದ್ಧಿ ಪಡಿಸುವುವಿಕೆ ಹಾಗೂ ಯುನೆಸ್ಕೋ ಹೆರಿಟೇಜ್ ಸೈಟ್‌ನಲ್ಲಿ ಸೇರ್ಪಡೆಗೊಳಿಸಲು ತೆಲಂಗಾಣ ಮಾದರಿಯಲ್ಲಿ ಸರ್ಕಾರದ ಮುಖ್ಯಕಾರ್ಯದರ್ಶಿಗಳ / ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ. ಐತಿಹಾಸಿಕ ಕೋಟೆ ಗೋಡೆಗಳು ಹಾಗೂ ಸುತ್ತಲಿನ ಸ್ಥಳಗಳ ಅಭಿವೃದ್ಧಿ.

ನಗರದ ಸಂಚಾರ ದಟ್ಟಣೆ ತಡೆಯಲು 'ಫ್ಲೈ ಓವರ್' ನಿರ್ಮಾಣ. ಬಸ್‌ಗಳ ಸಂಚಾರಕ್ಕೆ ಪ್ರತ್ಯೇಕ ದಾರಿ (ಲೈನ್) ನಿರ್ಮಾಣ. ನಗರದ ಮಾರುಕಟ್ಟೆಯ ದಟ್ಟಣೆಯ ಸ್ಥಳಗಳಲ್ಲಿ ವಾಹನ ನಿಲುಗಡೆಗೆ ಬಹುಮಹಡಿ ಕಟ್ಟಡ ನಿರ್ಮಿಸುವುದು.

ವಿಜಯಪುರದಲ್ಲಿ ಅಂತರ್‌ರಾಷ್ಟ್ರೀಯ ಮಟ್ಟದ ವಿವಿಧ ಕ್ರೀಡೆಗಳ ಕ್ರೀಡಾಂಗಣ ನಿರ್ಮಾಣ. ಸೈಕ್ಲಿಂಗ್ ವೆಲೋಡ್ರೋಮ್ ಹಾಗೂ ಸೈಕ್ಲಿಂಗ್ ಹಾಸ್ಟೇಲ್ ಉನ್ನತೀಕರಣ. ವಿಜಯಪುರದಲ್ಲಿ ವಿಮಾನಯಾನ ತರಬೇತಿ ಸಂಸ್ಥೆ ಪ್ರಾರಂಭಿಸುವುದು. ವಿಜಯಪುರ ಕೃಷಿ ಕಲ್ಯಾಣ ಅಭಿಯಾನ ಅಡಿ ಕೃಷಿ ಹಾಗೂ ತೋಟಗಾರಿಕೆ ರೈತರಿಗೆ ಉತ್ತೇಜನ ಹಾಗೂ ಸೌಲಭ್ಯಗಳನ್ನು ಒದಗಿಸುವುದು. ಹೈನುಗಾರಿಕೆ ಉತ್ತೇಜನ ನೀಡುವುದು ಹಾಗೂ ಹೈನುಗಾರಿಕೆ ಸಂಸ್ಥೆ ಪ್ರಾರಂಭಿಸುವುದು. ಸಾರ್ವಜನಿಕ ಶಾಲಾ ಶಿಕ್ಷಣ ಗುಣಮಟ್ಟ ಹೆಚ್ಚಿಸುವುದು, ಖಾಸಗಿ ಸಹಯೋಗದಲ್ಲಿ ಉತ್ಕೃಷ್ಟ ದರ್ಜೆಯ ಬಿಸಿಯೂಟ ಒದಗಿಸುವುದು. ವಿಜಯಪುರ ನಗರ ಹಾಗೂ ಪಟ್ಟಣಗಳಲ್ಲಿ ಅತ್ಯುತ್ತಮ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ. ಜಿಲ್ಲೆಯ ಆರೋಗ್ಯ ವ್ಯವಸ್ಥೆ ಸುಧಾರಣೆಗೆ, ಜಿಲ್ಲಾ ಆಸ್ಪತ್ರೆ, ತಾಲೂಕು ಆಸ್ಪತ್ರೆಗಳ ಆಧುನೀಕರಣ ಮತ್ತು ಗ್ರಾಮೀಣ ವೈದ್ಯಕೀಯ ಸೇವೆಗೆ ಒತ್ತು. ಆಯುಷ್ ಪದ್ಧತಿ, ನಿಸರ್ಗ ಚಿಕಿತ್ಸೆಗೆ ಪ್ರೋತ್ಸಾಹ. ನಗರ ಹಾಗೂ ಪಟ್ಟಣಗಳಲ್ಲಿ ಉಚಿತ ವೈಫೈ ವ್ಯವಸ್ಥೆ ಹಾಗೂ ಕ್ರೀಡಾ ಸೌಲಭ್ಯ ಒದಗಿಸುವುದು. ಸಮುದಾಯ ರೇಡಿಯೋ ಕೇಂದ್ರಗಳ ಸ್ಥಾಪನೆ ಮಾಡುವುದು. ತ್ಯಾಜ್ಯ ಸಂಸ್ಕರಣಾ ಘಟಕಗಳ ಸುಧಾರಣೆ ಮಾಡುವುದು. ಮೀನುಗಾರಿಕೆ ಕಾಲೇಜು ಹಾಗೂ ಬೃಹತ್ ಮೀನು ಸಂಗ್ರಹಾಲಯ ಪ್ರಾರಂಭಿಸುವುದು.

ಜಿಲ್ಲೆಯ ಸಮತೋಲಿತ ಮತ್ತು ಸಮಗ್ರ ಅಭಿವೃದ್ಧಿಗಾಗಿ ಇಂಡಿ ತಾಲ್ಲೂಕಿನ ಬೂದಿಹಾಳ ಮತ್ತು ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಕ್ರಮವಾಗಿ 19 ಮತ್ತು 6 ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿಯು ಪ್ರಗತಿಯಲ್ಲಿದೆ. ಅಲ್ಲದೆ, ಜಿಲ್ಲೆಯ ಮುಳವಾಡ ಗ್ರಾಮದಲ್ಲಿ ಕೆಐಎಡಿಬಿ ಸ್ವಾಧೀನದಲ್ಲಿರುವ 1,300 ಎಕರೆ ಜಾಗದಲ್ಲಿ 'ಉತ್ಪಾದನಾ ಕ್ಲಸ್ಟರ್' ಅನ್ನು ಸ್ಥಾಪಿಸಲಾಗುತ್ತಿದೆ ಎಂದು ಸಚಿವ ಎಂ.ಬಿ.ಪಾಟೀಲ ಹೇಳಿದರು.


---

### ರಾಜ ನುಡಿ

ಸಿಹಿಯ ರುಚಿ ನಾಲಿಗೆಯ ಮುಂಭಾಗದಲ್ಲಿ, ಕಹಿಯ ರುಚಿ ನಾಲಿಗೆಯ ಹಿಂಭಾಗದಲ್ಲಿ, ಉಪ್ಪಿನ ರುಚಿ ನಾಲಿಗೆಯ ಮುಂತುದಿಯಲ್ಲಿ, ಹುಳಿಯ ರುಚಿ ನಾಲಿಗೆಯ ಬಲ ಮತ್ತು ಎಡ ಭಾಗದಲ್ಲಿ ಮಾತ್ರ ಅನುಭವಕ್ಕೆ ಬರುವಂತದ್ದು. ಜೀವನದ ಕೆಲವು ರುಚಿಗಳು ಕೆಲವೆಡೆ ಮಾತ್ರ ಸಿಗುವಂತದ್ದು. ತಿಳಿದಿರಬೇಕು.

–ಡಾ. ರಾಜಶೇಖರ ನಾಗೂರ

---



### ವಚನ ಚಿಂತನ 288

ಲಿಂಗಾಂಗ ಸಾಮರಸ್ಯದ ಪರಿ

*ಅಂಗವ ಲಿಂಗಮುಖದಲ್ಲಿ ಅರ್ಪಿಸಿ,ಅಂಗ ಅನಂಗವಾಯಿತ್ತು.*
*ಮನವ ಅರಿವಿಂಗರ್ಪಿಸಿ, ಮನ ಲಯವಾಯಿತ್ತು.*
*ಭಾವವ ತೃಪ್ತಿಗರ್ಪಿಸಿ, ಭಾವ ಬಯಲಾಯಿತ್ತು.*
*ಅಂಗ ಮನ ಭಾವವಳಿದ ಕಾರಣ ಕಾಯ ಅಕಾಯವಾಯಿತ್ತು.*
*ಎನ್ನ ಕಾಯದ ಸುಖಭೋಗವ ಲಿಂಗವೆ ಭೋಗಿಸುವನಾಗಿ,*
*ಶರಣಸತಿ ಲಿಂಗಪತಿಯಾದೆನು.*
*ಇದು ಕಾರಣ, ಚೆನ್ನಮಲ್ಲಿಕಾರ್ಜುನನೆಂಬ ಗಂಡನ ಒಳಹೊಕ್ಕು ಬೆರಸಿದೆನು.*

*– ಅಕ್ಕಮಹಾದೇವಿಯವರು*

ಅಕ್ಕಮಹಾದೇವಿಯವರು ಶರಣಸತಿ ಲಿಂಗಪತಿ ಭಾವವನ್ನು ತಾವು ಹೇಗೆ ಹೊಂದಿದರು ಎಂಬುದನ್ನು ವಿವರಿಸಿದ್ದಾರೆ. ಅಂಗೈಯಲ್ಲಿನ ಇಷ್ಟಲಿಂಗವನ್ನು ದೃಷ್ಟಿಸುವುದರೊಂದಿಗೆ ಪ್ರಾರಂಭದಲ್ಲಿ ಅಂಗಭಾವ ಅಳಿಯುತ್ತ ಲಿಂಗಭಾವ ಬೆಳೆಯುತ್ತದೆ. ನಂತರ ಲಿಂಗದೊಂದಿಗೆ ಲೀನವಾದ ಅಂಗದೊಳಗಿನ ಮನವನ್ನು ಸಹ ಲಿಂಗದ ಅರಿವಿಗೆ ಅರ್ಪಿಸುವ ಮೂಲಕ ಮನಬಯಲುಗೊಳ್ಳುತ್ತದೆ. ಅಂಗ ಮನ ಅಳಿದ ಮೇಲೆ ಉಳಿದ 'ಭಾವ'ವನ್ನು ಸಹ ಕಾಯದಿಂದ ಕಿತ್ತೊಗೆದಾಗ ಶರಣಾಗತಿಯು ಒಡಮೂಡುತ್ತದೆ. ಇದನ್ನೇ ಅಕ್ಕ ಶರಣಸತಿ ಸ್ಥಿತಿ ಎಂದಿರುವುದು. ಸರ್ವಶಕ್ತ ಲಿಂಗದೇವನನ್ನು ಪತಿಯಾಗಿ ಸ್ವೀಕರಿಸುತ್ತ ಅಂತರಂಗದಲ್ಲಿ ಲಿಂಗಬೆರೆತ ಸ್ಥಿತಿಯನ್ನೇ ಚೆನ್ನಮಲ್ಲಿಕಾರ್ಜುನನೆಂಬ ಗಂಡನ ಒಳಹೊಕ್ಕು ಬೆರಸಿದೆನು ಎಂದಿರುವುದು. ಇದು ಲಿಂಗಾಂಗ ಸಾಮರಸ್ಯದ ಪರಿ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

---

ಪತ್ರಿಕಾಗೋಷ್ಠಿಯಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಸ್ಪಷ್ಟನೆ

# ಇಂಡಿ ಜಿಲ್ಲೆ ಮಾಡದಿದ್ದರೆ ರಾಜಕೀಯ ನಿವೃತ್ತಿ!

ಉದಯರಶ್ಮಿ ನ್ಯೂಸ್

ಇಂಡಿ: ನಗರವನ್ನು ಜಿಲ್ಲಾ ಕೇಂದ್ರವನ್ನಾಗಿ ಮಾಡಿಯೇ ಮುಂದಿನ 2028ರ ವಿಧಾನ ಸಭೆಯ ಚುನಾವಣೆ ಎದುರಿಸುತ್ತೇನೆ. ಜಿಲ್ಲೆ ಮಾಡದಿದ್ದರೆ ರಾಜಕೀಯ ನಿವೃತ್ತಿ ಹೊಂದುತ್ತೇನೆ. ನಾನು ಯಾವತ್ತಿಗೂ ಬದ್ಧತೆಯ ರಾಜಕಾರಣ ಮಾಡುತ್ತೇನೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಪುನರುಚ್ಚರಿಸಿದ್ದಾರೆ.

ಶುಕ್ರವಾರ ಇಂಡಿ ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.



ಇಂಡಿ ತಾಲ್ಲೂಕಿನ ಅಭಿವೃದ್ಧಿಗಾಗಿ ಚಿಮ್ಮಲಗಿ, ಮುಳವಾಡ, ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಬೇಕಾಗಿದೆ. ಈ ನಿಟ್ಟಿನಲ್ಲಿ ನಮ್ಮ ಭಾಗದ ರೈತರ ಸಂಕಷ್ಟಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದೇನೆ. ರೇವಣಿಸಿದ್ದೇಶ್ವರ ಏತ ನೀರಾವರಿ ಯೋಜನೆಯ ಕಾಮಗಾರಿ ಪ್ರಾರಂಭಿಸಲಾಗಿದೆ. ಕೋಲಾರದಿಂದ ಚಡಚಣ ತಾಲ್ಲೂಕಿನ ಸಾವಳಸಂಗ ಗ್ರಾಮದ ಗುಡ್ಡದವರೆಗೆ ನೀರು ತಂದು ಇಂಡಿ ತಾಲ್ಲೂಕಿನ 28 ಕೆರೆಗಳು ಮತ್ತು ಚಡಚಣ ತಾಲ್ಲೂಕಿನ 8 ಕೆರೆಗಳನ್ನು ತುಂಬಿಸುವ ಕೆಲಸ ಕೈಗೆತ್ತಿಕೊಂಡಿದೆ ಎಂದರು.

ಇಂಡಿ, ಚಡಚಣ, ಸಿಂದಗಿ ತಾಲ್ಲೂಕುಗಳ ದಂಡೆಗೆ ಹರಿದಿರುವ ಭೀಮಾ ನದಿಯಿಂದ 15 ಟಿಎಂಸಿ ನೀರಿನ ಬಳಕೆಯಾಗಬೇಕಿದೆ. ಈ ಬಗ್ಗೆ ಬರುವ ಅಧಿವೇಶನದಲ್ಲಿ ಸರ್ಕಾರಕ್ಕೆ ಒತ್ತಾಯಿಸಲಾಗುವದು. ಈ ಮೂರು ತಾಲ್ಲೂಕುಗಳ ಬರ ನಿಭಾಯಿಸಲು ಸರ್ಕಾರದ ನೀರಾವರಿ ಯೋಜನೆಗಳನ್ನು ತ್ವರಿತಗತಿಯಲ್ಲಿ ಜಾರಿಗೆ ತರಬೇಕಿದೆ. ಆ ನಿಟ್ಟಿನಲ್ಲಿ ಪ್ರಯತ್ನಿಸಲಾಗುವದು ಎಂದರು.

ಇಂಡಿ ತಾಲ್ಲೂಕಿನ ಪಡನೂರ ಗ್ರಾಮದ ಬಳಿ ಭೀಮಾ ನದಿಗೆ ಅಡ್ಡಲಾಗಿ ಸೇತುವೆ ಕಟ್ಟಲು ಕ್ರಿಯಾ ಯೋಜನೆ ಸಿದ್ದಗೊಂಡಿದ್ದು, ಬರುವ ಒಂದು ವರ್ಷದಲ್ಲಿ ಸೇತುವೆ ಲೋಕಾರ್ಪಣೆಯಾಗುವದು ಎಂದು ಭರವಸೆ ನೀಡಿದ ಅವರು ಈ ಸೇತುವೆಯಾದರೆ ಇಂಡಿಯಿಂದ ಪಡನೂರ, ತಡವಾಳ ಮಾರ್ಗವಾಗಿ ನೇರವಾಗಿ ಸೋಲಾಪೂರ ತಲುಪಬಹುದು ಎಂದರು.

ಇಂಡಿ ಪಟ್ಟಣದ ಶ್ರೀ ಶಾಂತೇಶ್ವರ ದೇವಸ್ಥಾನಕ್ಕೆ ವಿಶಾಲವಾದ ರಸ್ತೆ ಮಾಡಲು 1.5 ಕೋಟಿ ಅನುದಾನ ಅವಶ್ಯವಿದ್ದು, ಜನಸಾಮಾನ್ಯರು, ದೇವಸ್ಥಾನದ ಆಡಳಿತ ಮಂಡಳಿ ಹಾಗೂ ನಾನು ಸೇರಿ ಇಷ್ಟರಲ್ಲಿಯೇ ರಸ್ತೆ ಮಾಡಿಸಲಾಗುವುದು ಎಂದರು.

ಮುಂದಿನ ದಿನಗಳಲ್ಲಿ ಇಂಡಿ ಪಟ್ಟಣದಲ್ಲಿ ಅಕ್ಕಮಹಾದೇವಿ ವಿಶ್ವ ವಿದ್ಯಾಲಯದ ಕೇಂದ್ರ ಸ್ಥಾಪನೆ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ, ಚಡಚಣ ತಾಲ್ಲೂಕಿನ ಶಿರಾಡೋಣದಿಂದ ಲಿಂಗಸೂರು ಪಟ್ಟಣದವರೆಗೆ ರಸ್ತೆ ಅಗಲೀಕರಣಕ್ಕೆ ಮಂಜೂರಾತಿ ಸಿಕಿದ್ದು, ಇಷ್ಟರಲ್ಲಿಯೇ ರಸ್ತೆ ಕಾಮಗಾರಿ ಪ್ರಾರಂಭಿಸಲಾಗುವದು ಎಂದರು. ಇಂಡಿ ತಾಲ್ಲೂಕಿನ ಹಿರೇಬೇವನೂರ ಗ್ರಾಮದ ಜ್ಞಾನಯೋಗಿ ಡಾ.ಶಿವಕುಮಾರ ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡಿದ್ದು ರೈತರಿಗೆ ತೊಂದರೆಯಾಗಿದೆ. ಅದನ್ನು ಮುಂದಿನ ಕಬ್ಬು ಅರೆಯುವ ಹಂಗಾಮಿನ ಅವಧಿಯೊಳಗೆ ಪುನರ್ ಪ್ರಾರಂಭಿಸಲು ಪ್ರಯತ್ನಗಳು ನಡೆದಿವೆ ಎಂದರು.

---

## ಅಂಗನವಾಡಿ ಕೇಂದ್ರಗಳಿಗೆ ಕುರ್ಚಿ–ಟೇಬಲ್ ವಿತರಣೆ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ತಾಲೂಕಿನ ರಕ್ಕಸಗಿ ಗ್ರಾ.ಪಂ ನಲ್ಲಿ ಹಮ್ಮಿಕೊಳ್ಳಲಾಗಿದ್ದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ 11 ಅಂಗನವಾಡಿ ಕೇಂದ್ರಗಳಿಗೆ ಕುರ್ಚಿ ಮತ್ತು ಟೇಬಲ್‌ಗಳನ್ನು ಪಂಚಾಯತ ನ ಅಧ್ಯಕ್ಷ ರಿತೇಶ್ ನಾಡಗೌಡರು ವಿತರಿಸಿದರು.



ಈ ವೇಳೆ ಸದಸ್ಯರಾದ ಶಂಕರಗೌಡ ನಾಡಗೌಡರ, ನಿಂಗಣ್ಣ ಅಲ್ಲಾಪೂರ, ನಾಗಮ್ಮ ಹುಡೇದ, ಕಾರ್ಯದರ್ಶಿ ಸಿ.ಬಿ.ಹೊಳಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

### ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಗಣರಾಜ್ಯೋತ್ಸವ

# ಸಂವಿಧಾನದ ಆಶಯಗಳನ್ನು ಈಡೇರಿಸಿ :ಡಾ.ಮಿರ್ದೆ

**ಉದಯರಶ್ಮಿ ನ್ಯೂಸ್**




ವಿಜಯಪುರ: ದೇಶದ ಏಳಿಗೆಗಾಗಿ ಶ್ರಮಿಸಬೇಕಾಗಿರುವಂಥದ್ದು ಪ್ರತಿಯೊಬ್ಬರ ಆದ್ಯ ಕರ್ತವ್ಯ ಸಂವಿಧಾನದ ಆಶಯಗಳನ್ನು ಕಾರ್ಯರೂಪಕ್ಕೆ ಬರಲು ಪ್ರತಿಯೊಬ್ಬರಿಗೂ ಸಂವಿಧಾನದ ಹಕ್ಕುಗಳು, ಕಾನೂನುಗಳು ಹಾಗೂ ಮೌಲ್ಯಗಳನ್ನು ಎತ್ತಿ ಹಿಡಿದು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಈ ದಿನ ಆಚರಣೆ ಸಾರ್ಥಕವಾಗುತ್ತದೆ ಎಂದು ಪ್ರಾಚಾರ್ಯೆ ಡಾ.ಆರ್.ಎಮ್.ಮಿರ್ದೆ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್. ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ನಡೆದ 75ನೇ ಗಣರಾಜ್ಯೋತ್ಸವದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ದೇಶದ ಉದ್ದಗಲಕ್ಕೂ ಪ್ರತಿ ಮೂಲೆಯಲ್ಲಿಯೂ ಈ ಸಂಭ್ರಮ ಆಚರಿಸುತ್ತಿದ್ದು ದೇಶದ ಸಂಸ್ಕೃತಿಯನ್ನು ಬಿಂಬಿಸುವಂತಹ ಆಚರಣೆಯಾಗಿದೆ ಎಂದರು.

ಪ್ರತಿಯೊಂದು ದೇಶವೂ ತನ್ನದೇ ಆದಂತಹ ಸಂವಿಧಾನವನ್ನು ಹೊಂದಿರುತ್ತದೆ. ಅದೇ ತೆರನಾಗಿ ಭಾರತವು ಕೂಡ ವಿವಿಧ ಗಣಗಳಿಂದ ಕೂಡಿದ ಅಖಂಡ ಭಾರತದ ಜನತೆಗೆ ಸ್ವಾತಂತ್ರ್ಯ, ಸಮಾನತೆ, ಭಾತೃತ್ವ, ಹಾಗೂ ಜಾತಾತೀತೆಯ ಮೌಲ್ಯಗಳನ್ನು ಭಾರತೀಯರಿಗೆ ಅವಕಾಶ ಕಲ್ಪಿಸಿದ ಸಂವಿಧಾನದ ಜಾರಿಯಾದ ಸುದಿನ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರಮಾಣ ಪತ್ರಗಳು ವಿತರಿಸಲಾಯಿತು.

ಪ್ರಾಚಾರ್ಯ ಡಾ.ಆರ್.ಎಂ.ಮಿರ್ದೆ, ಪಿಯು ಕಾಲೇಜ್ ಪ್ರಾಚಾರ್ಯ ಪ್ರೊ.ಸಿ.ಬಿ.ಪಾಟೀಲ, ಎನ್‌ಸಿಸಿ ಅಧಿಕಾರಿಗಳಾದ ಡಾ.ರಾಮಚಂದ್ರ ನಾಯಕ, ದೈಹಿಕ ನಿರ್ದೇಶಕ ಎಸ್.ಕೆ.ಪಾಟೀಲ, ಸ್ಕೌಟ್ಸ್ ಮತ್ತು ಗೈಡ್ಸ್ ಅಧಿಕಾರಿಗಳಾದ ಡಾ.ಅನೀಲ.ನಾಯಕ, ಡಾ.ಉಷಾದೇವಿ ಹಿರೇಮಠ, ಸಾಂಸ್ಕೃತಿಕ ವಿಭಾಗದ ಕಾರ್ಯಾಧ್ಯಕ್ಷ ಡಾ.ಶ್ರೀನಿವಾಸ ದೊಡ್ಡಮನಿ, ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಪ್ರೊ.ಶ್ವೇತಾ ಸವನೂರ ಕಾರ್ಯಕ್ರಮ ನಿರೂಪಿಸಿದರು.

# ವಿಜಯಪುರ–ಬೆಂಗಳೂರು ಎಸಿ ವೋಲ್ವೋ ಬಸ್ ಆರಂಭ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ಹೊಸದಾಗಿ ವಿಜಯಪುರ–ಬೆಂಗಳೂರು ವೋಲ್ವೋ ಮಲ್ಟಿ ಎಕ್ಸಲ್ ಸ್ಲೀಪರ್ ಬಸ್ ಸಂಚಾರ ಜ.26ರಿಂದ ಆರಂಭಿಸಲಾಗಿದ್ದು, ಸಾರ್ವನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಜ.26ರ ಗಣರಾಜ್ಯೋತ್ಸವ ದಿನದಂದು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ಅವರು ಹೊಸದಾಗಿ ಆರಂಭಿಸಿರುವ ವಿಜಯಪುರ–ಬೆಂಗಳೂರು ಬಸ್ ಸಂಚಾರಕ್ಕೆ ಚಾಲನೆ ನೀಡಿದ್ದು, ಈ ಬಸ್ ಪ್ರತಿ ದಿನ ವಿಜಯಪುರದಿಂದ ರಾತ್ರಿ 9–45ಕ್ಕೆ ಹೊರಟು ಮರು ದಿನ ಬೆಳಿಗ್ಗೆ 7–30ಕ್ಕೆ ತಲುಪಲಿದೆ. ಅದರಂತೆ ಬೆಂಗಳೂರಿನಿಂದ ಪ್ರತಿದಿನ ರಾತ್ರಿ 10 ಗಂಟೆಗೆ ಹೊರಟು ಬೆಳಿಗ್ಗೆ 7–45ಕ್ಕೆ ವಿಜಯಪುರಕ್ಕೆ ತಲುಪಲಿದೆ.

ಈ ಸಾರಿಗೆ ಮುಂಗಡ ಟಿಕೆಟ್ ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿದ್ದು, ಪ್ರಯಾಣಿಕರು ಕೆಎಸ್‌ಆರ್‌ಟಿಸಿ ಮೂಲಕ ಇಲ್ಲವೇ ಸಮೀಪದ ಮುಂಗಡ ಟಿಕೆಟ್ ಕೌಂಟರ್ (ಕೇಂದ್ರ ಬಸ್ ನಿಲ್ದಾಣ) ಮೂಲಕ ಟಿಕೆಟ್ ಕಾಯ್ದಿರಿಸಿಕೊಳ್ಳಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇಶದ ಪ್ರಗತಿ ಮುಂದಾಗಿ : ಸೋಮನಕಟ್ಟಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ದೇಶದ ಸಂವಿಧಾನವು ನಮಗೆ ನೀಡಿರುವ ಹಕ್ಕುಗಳನ್ನು ಪ್ರತಿಪಾದಿಸದೇ ಸಂವಿಧಾನ ಹೇಳಿರುವ ಕರ್ತವ್ಯಗಳನ್ನು ಎಲ್ಲ ನಾಗರಿಕರು ಪಾಲಿಸಿದರೆ ದೇಶವು ಪ್ರಗತಿಯತ್ತ ಸಾಗುತ್ತದೆ ಎಂದು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಹೇಳಿದರು.

ಪಟ್ಟಣದ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ತಾಲೂಕಾಡಳಿತವು ಶುಕ್ರವಾರ ಹಮ್ಮಿಕೊಂಡಿದ್ದ 75 ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಇಡೀ ಜಗತ್ತಿನಲ್ಲಿಯೇ ಅತ್ಯಂತ ಬೃಹತ್, ಲಿಖಿತ ಸಂವಿಧಾನ ನಮ್ಮದಾಗಿದೆ. ನಮ್ಮ ಸಂವಿಧಾನವು ರಾಜ್ಯನಿರ್ದೇಶಕ ತತ್ವಗಳನ್ನು, ಸ್ವತಂತ್ರ ನ್ಯಾಯಾಂಗ ವ್ಯವಸ್ಥೆ, ಸಂಸದೀಯ ವ್ಯವಸ್ಥೆ, ಜಾತ್ಯಾತೀತ ನಿಲುವು, ಏಕ ಪೌರತ್ವ, ವಯಸ್ಕ ಮತದಾನ ವ್ಯವಸ್ಥೆ ಸೇರಿದಂತೆ ಅನೇಕ ಮೌಲ್ಯಯುತ ಅಂಶಗಳನ್ನು ಹೊಂದಿದೆ. ಇಂತಹ ಸಂವಿಧಾನ ಪಡೆದ ನಾವೆಲ್ಲರೂ ಧನ್ಯರು ಎಂದರು.

ಮೂಲ ಸಂವಿಧಾನದಲ್ಲಿ 395 ವಿಧಿಗಳು, 22 ಭಾಗಗಳು, 8 ಅನುಸೂಚಿಗಳಿದ್ದು. ಹಲವಾರು ತಿದ್ದುಪಡಿ ಕಂಡು ಪ್ರಸ್ತುತ ನಮ್ಮ ಸಂವಿಧಾನದಲ್ಲಿ 470 ವಿಧಿಗಳು,25 ಭಾಗಗಳು, 12 ಅನುಸೂಚಿಗಳನ್ನು ಒಳಗೊಂಡಿದೆ. ನಮ್ಮ ಸಂವಿಧಾನದ ಪೂರ್ವ ಪೀಠಿಕೆಯನ್ನು ನಾವು ಓದಿದರೆ ಇಡೀ ಸಂವಿಧಾನದ ತಿರುಳು ಅರ್ಥವಾಗುತ್ತದೆ. ನಾವೆಲ್ಲರೂ ಸಂವಿಧಾನದ ಆಶಯದಂತೆ ಜೀವನವನ್ನು ಸಾಗಿಸುವ ಮೂಲಕ ದೇಶದ ಕೀರ್ತಿಯನ್ನು ಉತ್ತುಂಗಕ್ಕೆ ಏರುವಂತೆ ಮಾಡುವ ಸಂಕಲ್ಪ ಮಾಡಬೇಕೆಂದರು.

ವೇದಿಕೆಯಲ್ಲಿ ತಾಪಂ ಇಓ ಡಾ.ಯುವರಾಜ ಹನಗಂಡಿ, ಬಿಇಓ ವಸಂತ ರಾಠೋಡ, ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ, ಪಿಐ ಶರಣಗೌಡ ನ್ಯಾಮಣ್ಣನವರ, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ, ಮಾಜಿ ಸೈನಿಕರಾದ ಕೆ.ಎಸ್.ಲೆಂಕೆನ್ನವರ, ಬಸವರಾಜ ತಳವಾರ, ವಿಠ್ಠಲ ಹಳ್ಳಿ, ಗುರಪ್ಪ ಲಮಾಣಿ, ಬಸವರಾಜ ದೊಡಮನಿ ಇತರರು ಇದ್ದರು. ಕ್ಷೇತ್ರಸಮನ್ವಾಧಿಕಾರಿ ಪಿ.ಯು.ರಾಠೋಡ ಸ್ವಾಗತಿಸಿದರು. ಶಿಕ್ಷಕರಾದ ಬಿ.ವ್ಹಿ.ಚಕ್ರಮನಿ, ಕೊಟ್ರೇಶ ಹೆಗಡ್ಯಾಳ ನಿರೂಪಿಸಿದರು. ಶಿಕ್ಷಕ ಶಿವಾನಂದ ಮಡಿಕೇಶ್ವರ ವಂದಿಸಿದರು.

# ಗಾಂಧಿ ಭವನದಲ್ಲಿ ಗಣರಾಜ್ಯೋತ್ಸವ ಡಿಸಿ ಟಿ.ಭೂಬಾಲನ್ ಧ್ವಜಾರೋಹಣ



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಜಿಲ್ಲಾ ಪಂಚಾಯತಿ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿ ಬಸಣ್ಣೆಪ್ಪ ಕಲಶೆಟ್ಟಿ, ವಿಜಯಪುರ ತಹಶೀಲ್ದಾರ ಶ್ರೀಮತಿ ಕವಿತಾ, ವಾರ್ತಾಧಿಕಾರಿ ಅಮರೇಶ ದೊಡಮನಿ, ವಾರ್ತಾ ಇಲಾಖೆಯ ಸುರೇಶ ಅಂಬಿಗೇರ, ಜ್ಞಾನೇಶ್ವರ ತಾಟೆ, ಗಾಂಧಿ ಭವನದ ಅಧಿಕಾರೇತರ ಸಮಿತಿ ಸದಸ್ಯರಾದ ಪೀಟರ್ ಅಲೆಕ್ಸಾಂಡರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರ ಶಾಸಕರ ಕಾರ್ಯಾಲಯ; ಧ್ವಜಾರೋಹಣ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ಸಾರ್ವಜನಿಕ ಜನ ಸಂಪರ್ಕ ಕಾರ್ಯಾಲಯದ ಆವರಣದಲ್ಲಿ ಶುಕ್ರವಾರ 75ನೇ ಗಣರಾಜ್ಯೋತ್ಸವ ಅಂಗವಾಗಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿರ್ದೇಶಕ ರಾಮನಗೌಡ ಪಾಟೀಲ ಯತ್ನಾಳ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ದ್ರಾಕ್ಷಿ ಮತ್ತು ವೈನ್ ಬೋರ್ಡ್ ಮಾಜಿ ಅಧ್ಯಕ್ಷರಾದ ಎಂ.ಎಸ್.ರುದ್ರಗೌಡ್ರ, ಮಹಾನಗರ ಪಾಲಿಕೆ ಸದಸ್ಯರಾದ ರಾಜಶೇಖರ ಮಗಿಮಠ, ಪ್ರೇಮಾನಂದ ಬಿರಾದಾರ, ಜವಾಹಾರ ಗೋಸಾವಿ, ವಿಠ್ಠಲ ಹೊಸಪೇಟೆ, ಮಲ್ಲಿಕಾರ್ಜುನ ಗಡಗಿ, ನಗರ ಆಶ್ರಯ ಸಮಿತಿ ನಾಮನಿರ್ದೇಶನ ಸದಸ್ಯರಾದ ಪಾರೀಸ್ ಶಿರಹಟ್ಟಿ, ಬಸವರಾಜ ಕಾಂಬಳೆ, ಭೂ ನ್ಯಾಯ ಮಂಡಳಿ ಸಮಿತಿ ನಾಮನಿರ್ದೇಶನ ಸದಸ್ಯರಾದ ಶರಣು ಕಾಖಂಡಕಿ, ಮುಖಂಡರಾದ ಬಾಬು ಶಿರಶ್ಯಾಡ, ವಿಕ್ರಮ ಗಾಯಕವಾಡ, ಬಸವರಾಜ ಕೋರಿ, ರಾಜಶೇಖರ ಭಜಂತ್ರಿ, ಅಶೋಕ ಬೆಲ್ಲದ, ಮಡಿವಾಳ ಯಾಳವಾರ, ಬಸವರಾಜ ಗೊಳಸಂಗಿ ಸೇರಿದಂತೆ ಮಹಾನಗರ ಪಾಲಿಕೆ ಮಾಜಿ ಸದಸ್ಯರು, ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು, ಹಿತೈಷಿಗಳು ಭಾಗವಹಿಸಿದ್ದರು.

# ಬಸವೇಶ್ವರ ಮಹಾವಿದ್ಯಾಲಯದಲ್ಲಿ ಗಣರಾಜ್ಯೋತ್ಸವ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ರಚಿಸಿರುವ ಸಂವಿಧಾನದಿಂದಾಗಿ ದೇಶದಲ್ಲಿ ಎಲ್ಲರೂ ಸಮಾನತೆಯಿಂದ ಜೀವನ ಸಾಗಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಹೇಳಿದರು.

ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 75 ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಧ್ಯಾಪಕ ಪಿ.ಎಲ್.ಹಿರೇಮಠ, ಪಪೂ ಕಾಲೇಜಿನ ಪ್ರಾಚಾರ್ಯ ಆರ್.ಎ.ಪವಾರ, ಪ್ರಾಧ್ಯಾಪಕರಾದ ಡಾ.ವೈ.ಬಿ.ನಾಯಕ, ಪ್ರೊ.ಡಿ.ಎಸ್.ಲಗಳಿ, ಪ್ರೊ.ದಿಲೀಪಕುಮಾರ, ಡಾ.ಎಸ್.ಬಿ.ಜನಗೊಂಡ, ವಿ.ಎನ್.ರಜಪೂತ, ಎಸ್.ಜೆ.ಸೂರ್ಯವಂಶಿ, ಪಿ.ಎಸ್.ಹೊರಕೇರಿ, ಜೆ.ಆರ್.ಡಾವಣಗೇರಿ, ಎ.ಬಿ.ಅಪ್ಪೋಜಿ, ಎಂ.ಆರ್.ಮುಮುದಾಪೂರ, ಪಿ.ಎಸ್.ನಾಟೀಕಾರ, ಭರತ, ಬಿ.ಆರ್.ಮ್ಯಾಗೇರಿ, ಎಸ್.ಎಸ್.ನಾಯ್ಕೋಡಿ, ಟಿ.ವೈ.ಮಣ್ಣೂರ, ಬಿ.ಬಿ.ಕಳ್ಳಿಗುಡ್ಡ, ಎಸ್.ಎಸ್.ಮನಗೂಳಿ ಇತರರು ಇದ್ದರು. ಪ್ರೊ.ಎಂ.ಕೆ.ಯಾದವ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಬಿಎಲ್ಡಿಇ ಸಂಸ್ಥೆಯ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಹತ್ತನೆ ತರಗತಿ ವಿದ್ಯಾರ್ಥಿಗಳ ಟ್ಯಾಲೆಂಟ್ ಪರೀಕ್ಷೆಯಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಈ ಪರೀಕ್ಷೆಯಲ್ಲಿ 350 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜ.26 ಪ್ರಜಾಪ್ರಭುತ್ವಕ್ಕೆ ಅಡಿಗಲ್ಲು ಹಾಕಿದ ಸುದಿನ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ದೇಶದಲ್ಲಿ ಸಂವಿಧಾನ ಜಾರಿಯಾದ ಜ.26,1950 ಇದು ವಿಶ್ವದ ದೊಡ್ಡ ಪ್ರಜಾಪ್ರಭುತ್ವಕ್ಕೆ ಅಡಿಗಲ್ಲು ಹಾಕಿದ ಸುದಿನವಾಗಿದೆ ಎಂದು ಮನಗೂಳಿ ಹೆಸ್ಕಾಂ ಇಲಾಖೆಯ ಕಿರಿಯ ಅಭಿಯಂತರ ಚನ್ನಗೌಡ ಪಾಟೀಲ ಹೇಳಿದರು.

ತಾಲೂಕಿನ ಮನಗೂಳಿ ಪಟ್ಟಣದ ಹೆಸ್ಕಾಂ ಇಲಾಖೆಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 75 ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಹಬ್ಬಗಳು ದೇಶ ಬಾಂಧವರಲ್ಲಿ ದೇಶ ಭಕ್ತಿಯನ್ನು ಇನ್ನಷ್ಟು ಗಟ್ಟಿಗೊಳಿಸುವ ಜೊತೆಗೆ ಸಂಭ್ರಮ ತುಂಬುವಂತೆ ಮಾಡುತ್ತವೆ. ವಿವಿಧತೆಯಲ್ಲಿ ಏಕತೆಯನ್ನು ಇಡೀ ಜಗತ್ತಿಗೆ ಸಾರಿದ ದೇಶ ನಮ್ಮದು. ಇಂತಹ ಹೆಮ್ಮೆಯ ದೇಶದಲ್ಲಿ ನಾವೆಲ್ಲರೂ ಒಂದಾಗಿ ದೇಶದ ಪ್ರಗತಿಗೆ ಮುಂದಾಗಬೇಕೆಂದರು.

ಧ್ವಜಾರೋಹಣ ನೆರವೇರಿಸಿದ ಶಾಖೆಯ ಸಹಾಯಕ ಅಭಿಯಂತರ ಪರಶುರಾಮ ಉಕ್ಕಲಿ, ಸಿಬ್ಬಂದಿಗಳಾದ ಸುರೇಶ ಕಲ್ಲೂರ, ಶ್ರೀಮಂತ ನಾಗರಾಳ ಸಂವಿಧಾನದ ಮಹತ್ವದ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮನಗೂಳಿಯ 33 ಕೆವ್ಹಿ ಸ್ಟೇಶನ್ ಜೆಇ ಶರಣು ಗೊಳಸಂಗಿ, ಸಿಬ್ಬಂದಿಗಳಾದ ರಾಜಶೇಖರ ಹೊಸಮನಿ, ಪವಾಡೆಪ್ಪ ಗಾಣಿಗೇರ, ಪೂಜಾ ಮನಗೂಳಿ, ಶಿವಾನಂದ ಸಜ್ಜನ, ರಮೇಶ ಹಾವಣ್ಣನವರ, ಅಶೋಕ ಬಳಗಾನೂರ, ಅಶೋಕ ತೆಲಗಿ, ಶ್ರೀಧರ ಲಮಾಣಿ, ಪ್ರಶಾಂತ ಬಿರಾದಾರ ಇತರರು ಇದ್ದರು.

# ಎಂ.ಎಚ್.ಎಂ.ಪ್ರೌಢಶಾಲೆಯಲ್ಲಿ ಗಣರಾಜ್ಯೋತ್ಸವ ಸಂಭ್ರಮ

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ಭಾರತೀಯ ಸಂವಿಧಾನ ಇದೊಂದು ಬೃಹತ್ ಸಂವಿಧಾನವಾಗಿದ್ದು, ಇದರ ಜಾರಿಗೆ ಮಹತ್ವದ ಕೊಡುಗೆ ನೀಡಿದವರು ಡಾ.ಬಿ.ಆರ್.ಅಂಬೇಡ್ಕರ್ ರವರು. ಸ್ವಾತಂತ್ರ್ಯ, ಸಮಾನತೆ, ಸಹೋದರತ್ವ ಏಕತೆ, ಭಾತೃತ್ವ ನಮ್ಮ ಸಂವಿಧಾನದಲ್ಲಿ ಇರುವ ಐದು ಪ್ರಮುಖ ಮೌಲ್ಯಗಳಾಗಿವೆ ಎಂದು ಮುಖ್ಯೋಪಾಧ್ಯಾಯ ಎಸ್.ಆಯ್. ಗಿಡ್ಡಪ್ಪಗೋಳ ನುಡಿದರು.

ಸ್ಥಳೀಯ ಮಂಜಪ್ಪ ಹರ್ಡೇಕರ ಪ್ರೌಢಶಾಲೆಯಲ್ಲಿ ಶುಕ್ರವಾರ 75 ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಣ ನೆರವೇರಿಸಿ ಅವರು ಮಾತನಾಡಿದರು.

ಪ್ರಾಚಾರ್ಯ ಪಿ.ಎ.ಹೇಮಗಿರಿಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇದಕ್ಕೂ ಮುನ್ನ ವಿದ್ಯಾರ್ಥಿನಿ ರತ್ನಾ ಜಲ್ಲಿ ಸಂವಿಧಾನ ಕುರಿತು ಮಾತನಾಡಿದಳು.


ಪ್ರಾಥಮಿಕ, ಪ್ರೌಢ, ಪದವಿ-ಪೂರ್ವ,ಡಿಗ್ರಿ ಕಾಲೇಜಿನ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಧ್ವಜವಂದನೆ ಕಾರ್ಯಕ್ರಮ ಕುಮಾರ ಮುಜಾಯಿಮಿಲ್ ನದಾಫ್, ದೈಹಿಕ ಶಿಕ್ಷಣ ಶಿಕ್ಷಕ ಜಿ.ಎಂ.ಹಿರೇಮಠ ಸಂಯೋಜಿಸಿದರು.

ಎಂ.ಎಚ್.ಎಂ.ಡಿಗ್ರಿ ಕಾಲೇಜಿನ ಪ್ರಾಚಾರ್ಯ ಎಚ್.ಎನ್.ಕೆಲೂರ, ಕಾಲೇಜಿನ ಉಪನ್ಯಾಸಕ ಮಹಾಂತೇಶ ಸಜ್ಜನ, ಟಿ.ಬಿ.ಕರದಾನಿ, ಮಮತಾ ಕರೆಮುರಗಿ, ಸ್ಕೌಟ್ ಅಧಿಕಾರಿ ಎಂ.ಎಚ್.ಬಳಬಟ್ಟಿ, ಶ್ರೀಮತಿ:ಜಗದೇವಿ.ಕೆ.ಎಸ್.ಎಸ್.ಅಂಗಡಿ,ಮಹೇಶ ಗಾಳಪ್ಪಗೋಳ, ಮುಖ್ಯಶಿಕ್ಷಕಿ ಕೆ.ಎನ್.ಹರೇಮಠ, ರಿಯಾನಾ ಕಾಲೇಖಾನ, ಅಡುಗೆ ಮುಖ್ಯ ಶಿಕ್ಷಕಿ ಸುಮಿತ್ರಾ, ಲಕ್ಷ್ಮಿಂಭಾಯಿ, ಮಮತಾ, ಕಮಾಲಾ ಲವಾಣಿ, ಬಾನು, ಉಪಸ್ಥಿತರಿದ್ದರು,

ಕು. ಕಾವೇರಿ ಅಕ್ಕೋಜಿ ನಿರೂಪಿಸಿದರು, ಪಿ.ವಾಯ್.ಧನಶೆಟ್ಟಿ ವಂದಿಸಿದರು.

# ವ್ಯಕ್ತಿ ಕಾಣೆ, ಪತ್ತೆಗೆ ಮನವಿ



ಮುದ್ದೇಬಿಹಾಳ: ತಾಲೂಕಿನ ನೇಬಗೇರಿ ಗ್ರಾಮದ ರವಿಚಂದ್ರ ಕಮ್ಮಾರ ಜ.25 ರಂದು ಕಾಣೆಯಾಗಿದ್ದಾನೆ ಎಂದು ಆತನ ಪತ್ನಿ ಮಾಶಾಬಿ ಇಲ್ಲಿನ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ.

ಪ್ರೇಮ ವಿವಾಹವಾಗಿದ್ದ ಸಧ್ಯ ಪಟ್ಟಣದ ಗಣೇಶ ನಗರದಲ್ಲಿ ವಾಸವಾಗಿದ್ದ ದಂಪತಿ ಮಧ್ಯೆ ಲೋನ್ ಕಟ್ಟುವ ವಿಷಯಕ್ಕಾಗಿ ಮನಸ್ತಾಪವಾಗಿದ್ದು, ಅಂದು ಮನೆಯಿಂದ ಹೋದವನು ಮರಳಿ ಮನೆಗೆ ಬಂದಿಲ್ಲ ಎಂದು ಪತ್ನಿ ತನ್ನ ದೂರಿನಲ್ಲಿ ತಿಳಿಸಿದ್ದಾಳೆ.

ಪೋಟೋದಲ್ಲಿರುವ ಚಹರಾಪಟ್ಟಿಯ ವ್ಯಕ್ತಿ ಯಾರಿಗಾದರೂ ಕಂಡಲ್ಲಿ 08356–220333, 08356–220332 ನಂಬರ್ ಗಳಿಗೆ ಇಲ್ಲವೇ ಹತ್ತಿರದ ಪೊಲೀಸ್ ಠಾಣೆಯಲ್ಲಿ ಮಾಹಿತಿ ನೀಡುವಂತೆ ಪೊಲೀಸ್ ಪ್ರಕಟಣೆ ತಿಳಿಸಿದೆ

# ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ



**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ ಪ್ರಯುಕ್ತ ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್. ಪಾಟೀಲ ಕುಚಬಾಳ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತ ಸಂವಿಧಾನ ಜಾರಿಗೆ ಬಂದ ಪವಿತ್ರ ದಿನ ಗಣರಾಜ್ಯೋತ್ಸವ, ಡಾ.ಬಿ.ಆರ್. ಅಂಬೇಡ್ಕರ ಅವರು ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನ ರಚಿಸಿದ್ದಾರೆ, ಹಕ್ಕು ಗಳು, ಕರ್ತವ್ಯಗಳು, ರಾಜ್ಯ ನಿರ್ದೇಶಕ ತತ್ವಗಳು ಹೀಗೆ ಜಗತ್ತಿನಲ್ಲೇ ಮಾದರಿ ಸಂವಿಧಾನವಾಗಿದೆ ಎಂದರು.

ಸಂಸದ ರಮೇಶ ಜಿಗಜಿಣಗಿ, ಬೆಳಗಾವಿ ವಿಭಾಗ ಪ್ರಭಾರಿಗಳಾದ ಚಂದ್ರಶೇಖರ್ ಕವಟಗಿ, ಬೆಳಗಾವಿ ವಿಭಾಗ ಸಂಘಟನಾ ಕಾರ್ಯದರ್ಶಿ ಪ್ರಕಾಶ ಅಕ್ಕಲಕೋಟ್, ಕರ್ನಾಟಕ ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ರಾಜ್ಯಾಧ್ಯಕ್ಷ ವಿಜುಗೌಡ ಪಾಟೀಲ್, ಪಾಲಿಕೆ ಸದಸ್ಯ ಶಿವರುದ್ರ ಬಾಗಲಕೋಟ, ಮಲ್ಲನಗೌಡ ಪಾಟೀಲ, ಬಸವರಾಜ ಬಿರಾದಾರ ಹಾಗೂ ಪಕ್ಷದ ಜಿಲ್ಲಾ ಪದಾಧಿಕಾರಿಗಳು ನಗರ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಂವಿಧಾನ ಜಾಗೃತಿ ಜಾಥಕ್ಕೆ ಸಚಿವ ಪಾಟೀಲ ಚಾಲನೆ

**ಉದಯರಶ್ಮಿ ನ್ಯೂಸ್**




ವಿಜಯಪುರ: ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ್ ಅವರು ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಜ.26ರಂದು ಸಂವಿಧಾನ ಜಾಗೃತಿ ಜಾಥಾ ಸ್ತಬ್ಧಚಿತ್ರಕ್ಕೆ ಹಸಿರು ನಿಶಾನೆ ತೋರುವ ಮೂಲಕ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದರು.


ಇಂದಿನಿಂದ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಂಚರಿಸಿ ಸಂವಿಧಾನದ ಆಶಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಸಚಿವರಾದ ಡಾ. ಎಂ.ಬಿ.ಪಾಟೀಲ ಅವರು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಎರಡು ಎಸಿ ಮಲ್ಟಿ ಎಕ್ಸಲ್ ವೊಲ್ವೋ ಸ್ಲೀಪರ್ ಬಸ್ಸಿಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ, ಮೇಯರ್ ಮಹೇಜಬಿನ ಹೋರ್ತಿ, ಉಪ ಮೇಯರ್ ದಿನೇಶ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಪುಂಡಲಿಕ ಮಾನವರ, ಕೆಕೆರ್ಟಿಸಿಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿದ್ದರು.

# ಶ್ರೀರಾಮನಿಲ್ಲದ ಭಾರತ ಊಹಿಸಲು ಅಸಾಧ್ಯ :ಕರದಳ್ಳಿ

**ಉದಯರಶ್ಮಿ ನ್ಯೂಸ್**




ಯಡ್ರಾಮಿ: ಪ್ರಭು ಶ್ರೀರಾಮನನ್ನು ಬಿಟ್ಟು ಭಾರತವಿಲ್ಲ , ಭಾರತಬಿಟ್ಟು ರಾಮನಿಲ್ಲ. ಶ್ರೀರಾಮನಿಲ್ಲದ ಭಾರತವನ್ನು ಊಹಿಸಿಕೊಳ್ಳಲು ಸಾಧ್ಯವಿಲ್ಲ ಎಂದು ರಾಷ್ಟ್ರೀಯ ಮತ್ತು ಸ್ವದೇಶಿ ಚಿಂತಕ ಮಹಾದೇವಯ್ಯ ಕರದಳ್ಳಿ ಕಲಬುರಗಿ ಅವರು ಹೇಳಿದರು.

ಯಡ್ರಾಮಿ ಸಗರಾದ್ರಿ ಸಾಂಸ್ಕೃತಿ-ಕ ಸಂಗಮ ಟ್ರಸ್ಟ್ ಹಾಗೂ ಶ್ರೀ ಮುರುಘೇಂದ್ರ ಫೌಂಡೇಶನ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಆನ್ಲೈನ್ ಹುಣ್ಣಿಮೆ ಕಾರ್ಯಕ್ರಮದ ಸಂಗಮ –56ರಲ್ಲಿ ರಾಷ್ಟ್ರಪುರುಷ ಶ್ರೀರಾಮ ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು.

ಅಯೋಧ್ಯೆಯ ಪ್ರಭು ಶ್ರೀರಾಮ ತನ್ನ ಬದುಕಿನುದ್ದಕ್ಕೂ ಉದಾತ್ತ ಮೌಲ್ಯಗಳನ್ನು ಅನುಸರಿಸಿ ಆದರ್ಶ ಮೆರೆದಿದ್ದಾನೆ. ಆತನಲ್ಲಿನ ಸತ್ಯ, ನಿಷ್ಠೆ ಪ್ರಜಾಪರಿಪಾಲನೆ ಹಾಗೂ ಧರ್ಮ , ಇತ್ಯಾದಿ ಶ್ರೇಷ್ಠ ಗುಣಗಳೇ ರಾಮನನ್ನು ಮಹಾದೇವರನ್ನಾಗಿಸಿದವು. ಸಾವಿರಾರು ವರ್ಷಗಳ ಹಿಂದೆ ಬದುಕಿ ಹೋದ ಶ್ರೀರಾಮ ಇವತ್ತಿಗೂ ಕೋಟ್ಯಂತರ ಭಾರತೀಯರ ಮನದಲ್ಲಿ ನೆಲೆಸಿರುವುದು ಹುಡುಗಾಟದ ವಿಷಯವಲ್ಲ. ರಾಮನ ಆದರ್ಶ ಗುಣಗಳು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಡೆದರೆ ಗಾಂಧೀಜಿಯವರ ರಾಮರಾಜ್ಯದ ಕನಸು ನನಸಾಗುವಲ್ಲಿ ಯಾವ ಅನುಮಾನಗಳಿಲ್ಲ ಎಂದರು.

ಪ್ರಭು ಶ್ರೀರಾಮಚಂದ್ರನನ್ನು ಧಾರ್ಮಿಕ ನಾಯಕ ಎಂದು ನೋಡದೇ ಆದರ್ಶ ರಾಷ್ಟ್ರಪುರುಷ ಎಂದು ತಿಳಿದರೆ ರಾಮ ಎಲ್ಲರಿಗೂ ನಿಲುಕುವ ವ್ಯಕ್ತಿಯಾಗಿಯೇ ಕಾಣುತ್ತಾನೆಂದು ಎಂದು ತಿಳಿಸಿದರು.

ಆನ್ಲೈನ್ ಕಾರ್ಯಕ್ರಮವನ್ನು ನುಡಿಯ ಮೂಲಕ ಮಾದನಹಿಪ್ಪರಗಿ ವಿರಕ್ತಮಠದ ಪೂಜ್ಯ ಶ್ರೀ ಅಭಿನವ ಶಿವಲಿಂಗ ಮಹಾಸ್ವಾಮಿಗಳು ಉದ್ಘಾಟಿಸಿದರು. ಯಡ್ರಾಮಿ ವಿರಕ್ತಮಠದ ಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಸಂಶೋಧಕ ಸಾಹಿತಿಗಳಾದ ಡಿ.ಎನ್.ಅಕ್ಕಿ, ನಿಂಗನಗೌಡ ಪೊಲೀಸ್ ಪಾಟೀಲ, ಪ್ರಕಾಶ ಸಾಹು ಬೆಲ್ಲದ, ಬಿ.ಬಿ.ವಾರದ, ಡಾ. ಭಾಗ್ವವತಿ ಕೆಂಭಾವಿ, ಡಾ. ಮಾಳಪ್ಪ ಪಾಟೀಲ, ಪ್ರಿಯಾಂಕಾ, ಆರ್.ಜಿ.ಪುರಾಣಿಕ, ಗೊಲ್ಲಾಳಪ್ಪಗೌಡ ಬಿರಾದಾರ, ರುದ್ರಗೌಡ ಪಾಟೀಲ, ವಿಜಯೇಂದ್ರ ಕುಲಕರ್ಣಿ, ಸಿದ್ರಾಮಪ್ಪ ನವಲಗುಂದ, ಸುಧೀಂದ್ರ ಕುಲಕರ್ಣಿ ಬೆಂಗಳೂರು, ಬಸವರಾಜ ಅರಕೇರಿ, ಈರಣ್ಣಗೌಡ ಬಿರಾದಾರ, ಪ್ರಶಾಂತ ಕುನ್ನೂರ, ಸಂಗಮದ ಸದಸ್ಯ-ರಿದ್ದರು.

ಬಸವರಾಜ ಬೋರಗಿ ಪ್ರಾರ್ಥಿಸಿದರು, ಮಲ್ಲಿಕಾರ್ಜುನ ಯಾದಗಿರಿ ಸ್ವಾಗತಿಸಿದರು, ಡಾ. ಸಂತೋಷ ನವಲಗುಂದ ನಿರೂಪಿಸಿ, ವಂದಿಸಿದರು.

ಇಂಡಿ: ಗಣರಾಜ್ಯೋತ್ಸವದಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಅಭಿಮತ

# ನಮ್ಮದು ವಿಶ್ವದಲ್ಲೇ ಯಶಸ್ವಿ ಪ್ರಜಾಪ್ರಭುತ್ವ ರಾಷ್ಟ್ರ

**ಉದಯರಶ್ಮಿ ನ್ಯೂಸ್**




ಇಂಡಿ: ಇಡೀ ಪ್ರಪಂಚದಲ್ಲೇ ಯಶಸ್ವಿ ಪ್ರಜಾಪ್ರಭುತ್ವ ರಾಷ್ಟ್ರ ನಮ್ಮದು. ಶಾಂತಿ, ಅಹಿಂಸೆ, ಸಮಾನತೆ, ಸಹಬಾಳ್ವೆ, ಸರ್ವಧರ್ಮ ಸಹಿಷ್ಣುತೆ ಗಣತಂತ್ರ ವ್ಯವಸ್ಥೆಯ ಮೂಲ ಆಶಯ. ಜಗತ್ತಿನಲ್ಲಿ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಭಾರತ ಅತಿದೊಡ್ಡ ಪ್ರಜಾಪ್ರಭುತ್ವ ದೇಶವಾಗಿದೆ ಎಂದು ಶಾಸಕ, ವಿಧಾನಸಭೆ ಅಂದಾಜು ಸಮೀತಿ ಅಧ್ಯಕ್ಷ ಯಶವಂತರಾಯಗೌಡ ಪಾಟೀಲ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಕ್ರೀಡಾಂಗಣದಲ್ಲಿ ತಾಲೂಕಾ ಆಡಳಿತ ವತಿಯಿಂದ ನಡೆದ 75 ನೇ ಗಣರಾಜ್ಯೋತ್ಸವದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶ ಹಾಗೂ ವ್ಯಕ್ತಿಯ ಆತ್ಮ ಗೌರವ ಪ್ರತೀಕವಾಗಿರುವ ಸಂವಿಧಾನ ತೋರುವ ಬೆಳಕಿನಲ್ಲಿ ಜವಾಬ್ದಾರಿಯ ಹೆಜ್ಜೆ ಹಾಕೋಣ ಎಂದ ಅವರು, ಇಂಡಿ ತಾಲೂಕು ಸತತ ಬರಗಾಲಪೀಡಿತ ಪ್ರದೇಶವಾಗಿದೆ. ಈ ಭಾಗದ ನೀರಾವರಿ ಕಾರ್ಯಗಳು ಸಮರೋಪಾದಿಯಲ್ಲಿ ಆಗಬೇಕಾಗಿದೆ. ಅದಕ್ಕಾಗಿ ಪ್ರಥಮ ಪ್ರಾಮುಖ್ಯತೆ ನೀಡ ಬೇಕಾಗಿದೆ ಎಂದ ಅವರು ಈ ಶತಮಾನ ಕಂಡ ಶ್ರೇಷ್ಠ ಸಂತ ಸಿದ್ದೇಶ್ವರ ಶ್ರೀಗಳ ನಡೆ-ನುಡಿ ಪಾಲಿಸಿ ನಮ್ಮ ಯುವಕರು ಅವರ ಹಾಕಿ ಕೊಟ್ಟ ಮಾರ್ಗದಲ್ಲಿ ನಡೆಯಬೇಕಿದೆ ಎಂದರು.

ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಮಾತನಾಡಿ, ಈ ದಿನದಂದು ಇಡೀ ದೇಶವೇ ಸಂಭ್ರಮಿಸುತ್ತದೆ. ಈದಿನ ಸಂವಿಧಾನ ಜಾರಿಯಾದ ದಿನವಾಗಿದೆ. ದೇಶದ ನಾಗರಿಕರಾದ ನಾವು ಸಂವಿಧಾನವನ್ನು ಗೌರವಿಸಿ, ಸಂವಿಧಾನದ ಆಶಯದಂತೆ ಬದುಕಿ ಬಾಳೋಣ ಎಂದರು.

ತಹಸೀಲ್ದಾರ ಬಿ.ಎಸ್. ಕಡಕಭಾವಿ, ತಾಪಂ ಇಒ ಬಾಬು ರಾಠೋಡ, ಕ್ಷೇತ್ರಶಿಕ್ಷಣಾಧಿಕಾರಿ ಎಚ್. ಆರ್. ಅಲಗೂರ, ಡಿವೈಎಸ್‌ಪಿ ಜಗದೀಶ ಎಸ್. ಎಚ್, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ ಮತ್ತಿತರಿದ್ದರು.

ಬಸವರಾಜ ಗೊರನಾಳ ನಿರೂಪಿಸಿದರು.

ಕೃಷಿ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರ, ಹೆಸ್ಕಾಂ ಎಇಇ ಎಸ್.ಆರ್. ಮೆಂಡೆಗಾರ,. ಎಸ್.ಆರ್. ರುದ್ರವಾಡಿ, ಲೋಕೋಪಯೋಗಿ ಅಧಿಕಾರಿ ದಯಾನಂದ ಮಠ ಸೇರಿದಂತೆ ಮತ್ತಿತರರಿದ್ದರು.

# ಸಂಗೊಳ್ಳಿ ರಾಯಣ್ಣನ ದೇಶಭಕ್ತಿ ಮಕ್ಕಳಿಗೆ ತಿಳಿಸಿ :ಬೋನಾಳ



**ಉದಯರಶ್ಮಿ ನ್ಯೂಸ್**

ಮೋರಟಗಿ: ಸ್ವಾತಂ□□□□□□ದ ಕ್ರಾಂತಿಯ ಕಿಡಿ ಹಚ್ಚಿದ ಕರ್ನಾಟಕದ ಗಂಡೆದೆಯ ಹೋರಾಟಗಾರ, ಬ್ರಿಟಿಷರ ನಿದ್ದೆಗೆಡಿಸಿದ ಕ್ರಾಂತಿ ಪುರುಷ ರಾಯಣ್ಣನ ದೇಶಭಕ್ತಿ ಮಕ್ಕಳಿಗೆ ತಿಳಿಸಬೇಕು ಎಂದು ತಮ್ಮಣ್ಣಸಾಹು ಬೋನಾಳ ಹೇಳಿದರು.

ತಾಲೂಕಿನ ಮೋರಟಗಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣರ ವೃತ್ತದಲ್ಲಿ ಹಮ್ಮಿಕೊಂಡ ಸಂಗೋಳ್ಳಿ ರಾಯಣ್ಣರ ಪುಣ್ಯಸ್ಮರಣೆ ಹಾಗೂ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರೀತಿ ವಿಶ್ವಾಸಕ್ಕೆ ಇನ್ನೊಂದು ಹೆಸರೇ ರಾಯಣ್ಣ, ಅವರ ಧೈರ್ಯ, ಶೌರ್ಯ, ಮೆಚ್ಚುವಂತದ್ದು ಕಿತ್ತೂರರಾಣಿ ಚನ್ನಮ್ಮಳ ಬಲಗೈ ಬಂಟನಾಗಿ ಹೆತ್ತ ತಾಯಿಗಿಂತ ಹೆಚ್ಚು ಆರಾಧಿಸಿ ಅವಳ ಆಜ್ಞೆಯಂತೆ ಬ್ರಿಟಿಷರ ರುಂಡಗಳನ್ನು ಚಂಡಾಡಿದ ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟದ ಸೇನಾನಿ ಸಂಗೊಳ್ಳಿ ರಾಯಣ್ಣರ ಆದರ್ಶ ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದರು.

ಈ ವೇಳೆ ಶಿವಾನಂದ ಕೆರಿಗೊಂಡ, ರಾವುತ್ರಾಯ ಪೂಜೆರಿ, ಶಿವಶರಣ ಕೆ-ರಿಗೊಂಡ, ಭೀಮು ನಾಯಕ್, ನಿಂಗಣ್ಣ ಪೂಜಾರಿ,ಶಿವಾನಂದ ಕೆರಿಗೊಂಡ, ಹನಮಂತ ಹೂಗಾರ, ಕನಕಸೇನೆ ಅಧ್ಯಕ್ಷ ಶಿವಾನಂದ ಕೆರಿಗೊಂಡ, ರಾಯಣ್ಣ ಯುವಸೇನೆ ಅಧ್ಯಕ್ಷ ಮಂಜು ಮಯೂರ, ಸಂತೋಷ ಕೆರಿಗೊಂಡ, ಕೆಂಚು ಪೂಜಾರಿ, ಗುರು ಅಗಸರ ಸೇರಿದಂತೆ ಅನೇಕರು ಇದ್ದರು.

## ವಿವಿಧೆಡೆ 75ನೇ ಗಣರಾಜ್ಯೋತ್ಸವ

ಗ್ರಾಮದ ಕಲ್ಪವೃಕ್ಷ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಕಾಲೇಜಿನಲ್ಲಿ, ಸದ್ಭಾವನಾ ಹಿರಿಯ ಪ್ರಾರ್ಥಮಿಕ ಶಾಲೆಯಲ್ಲಿ, ಆಂಗ್ಲ ಮಾಧ್ಯಮ ಐಡಿಎಲ್ ಶಾಲೆಯಲ್ಲಿ, ಜ್ಞಾನಜ್ಯೋತಿ ಹಿರಿಯ ಪ್ರಾರ್ಥಮಿಕ ಶಾಲೆಯಲ್ಲಿ, ಬಸವೇಶ್ವರ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ, ಸಮುದಾಯ ಅರೋಗ್ಯ ಕೇಂದ್ರದಲ್ಲಿ, ಹೊರ ಪೊಲೀಸ್ ಠಾಣೆ ಸರ್ಕಾರಿ ಹಾಗೂ ಖಾಸಗಿ ಬ್ಯಾಂಕ್ ಸೇರಿದಂತೆ ಅನೇಕ ಇಲಾಖೆಯಲ್ಲಿ ಧ್ವಜಾರೋಹಣ ನೆರವೇರಿಸಿ ಸಂಭ್ರಮದಿಂದ ಗಣರಾಜ್ಯೋತ್ಸವ ಹಾಗೂ ಸಂಗೊಳ್ಳಿ ರಾಯಣ್ಣರ ಜಯಂತೋತ್ಸವ ಕಾರ್ಯಕ್ರಮವನ್ನು ಆಚರಿದರು.

# ಸಿಂದಗಿಯ ವಿವಿಧೆಡೆ ಗಣರಾಜ್ಯೋತ್ಸವ ಸಂಭ್ರಮ

**ಉದಯರಶ್ಮಿ ನ್ಯೂಸ್**



ಸಿಂದಗಿ: ರಾಜ್ಯದ ವಿವಿಧ ತಾಲೂಕುಗಳಲ್ಲಿ ಈ ಬಾರಿ ಮಳೆಯ ಕೊರತೆ ಉಂಟಾಗಿ ಬರಗಾಲ ಛಾಯೆ ಮೂಡಿದೆ. ಅದರಲ್ಲಿ ಸಿಂದಗಿ ತಾಲೂಕು ಸಹ ಒಂದು ಎಂದು ತಾಲೂಕು ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ ಹೇಳಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕು ಗಣರಾಜ್ಯೋತ್ಸವ ಸಮಿತಿ ಹಮ್ಮಿಕೊಂಡ ತಾಲೂಕು 75ನೇ ಗಣರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸಂವಿಧಾನದ ಮೂರು ಅಂಗಗಳಾದ ಶಾಸಕಾಂಗ, ನ್ಯಾಯಾಂಗ, ಕಾರ್ಯಾಂಗ ಸಮರ್ಪಕವಾಗಿ ಕಾರ್ಯ್ ನಿರ್ವಹಿಸಿದಾಗ ಕ್ಷೇತ್ರವು ಬೆಳವಣಿಗೆಯಾಗುತ್ತೆ. ಅಟಲಜೀ ಜನಸ್ನೇಹಿ ಕೇಂದ್ರದ 44 ಸೇವೆಗಳನ್ನು ಜನರಿಗೆ ತಲುಪಿಸುವಲ್ಲಿ ವಿಜಯಪುರ ಜಿಲ್ಲೆಯ 13 ತಾಲೂಕುಗಳಲ್ಲಿ ಸಿಂದಗಿ ಪ್ರಥಮ ಸ್ಥಾನದಲ್ಲಿದೆ. ಹೋಬಳಿ ಮಟ್ಟದಲ್ಲಿ 3ನೆಯ ಸ್ಥಾನದಲ್ಲಿದೆ. ತಾಲೂಕು ಕಂದಾಯ ನ್ಯಾಯಾಲಯದಲ್ಲಿ 2 ಮತ್ತು 5ವರ್ಷದ ಪ್ರಕರಣಗಳನ್ನು ಇತ್ಯರ್ಥ-ರ್ಗೊಳಿಸಲಾಗಿದೆ. ಇನ್ನೂ 6 ತಿಂಗಳಿಗಿಂತ ಹಿಂದಿನ ಯಾವ ಪ್ರಕರಣಗಳಿಲ್ಲ. ಒಂದು ಪೈಕಿ ಪಾಣಿ ಪ್ರಕರಣ ತಾಂತ್ರಿಕ ದೋಷದಿಂದ ಮಾತ್ರ ಬಾಕಿಯಿದೆ ಎಂದರು.

ಇದೇ ಸಂದರ್ಭದಲ್ಲಿ ಸಿಪಿಐ ಡಿ.ಹುಲುಗಪ್ಪ, ನೌಕರರ ಸಂಘದ ತಾಲೂಕಾಧ್ಯಕ್ಷ ಅಶೋಕ ತೆಲ್ಲೂರ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಶ್ರೀಶೈಲ ಯಳಮೇಲಿ ಮಾತನಾಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಆರೀಫ ಬಿರಾದಾರ, ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ, ಸಹಾಯಕ ಕೃಷಿ ನಿರ್ದೇಶಕ ಎಚ್. ವೈ ಸಿಂಗೆಗೊಳ ವೇದಿಕೆಯಲ್ಲಿದ್ದರು.

ಪಿಎಸ್ಐ ಭೀಮಣ್ಣ ರಬಕವಿ, ಅಪರಾಧ ವಿಭಾಗದ ಪಿಎಸ್ಐ ಅಂಗಡಿ, ಅಬಕಾರಿ ವೃತ್ತ ನಿರೀಕ್ಷಕಿ ಆರತಿ ಖೈನೂರ, ಸಿಡಿಪಿಒ ಶಂಭುಲಿಂಗ ಹಿರೇಮಠ, ಅಗ್ನಿ ಶಾಮಕ ದಳದ ಅಧಿಕಾ-ರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಸೇರಿ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಹಾಜರಿದ್ದರು.

ತಾಪಂ ಇಒ ರಾಮು ಅಗ್ನಿ ಸ್ವಾಗತಿಸಿದರು. ಜಿ.ಪಿ.ಪೋರವಾಲ ಕಾಲೇಜಿನ ದೈಹಿಕ ನಿರ್ದೇಶಕ ರವಿ ಗೋಲಾ ನಿರೂಪಿಸಿದರು.

ಈ ವೇಳೆ ಚನ್ನವೀರ ಪ್ರೌಢಶಾಲೆ, ಜ್ಞಾನ ಭಾರತಿ, ಎಮ್‌ಪಿಕೆಬಿಎಸ್ ಹಾಗೂ ಎಮ್-ಎಮ್‌ಟಿಎಸ್ ಶಾಲೆ, ಆದರ್ಶ ವಿದ್ಯಾಲಯ ಹಾಗೂ ಜಿ.ಪಿ.ಪೋರವಾಲ್ ಕಾಲೇಜಿನ ಎನ್‌ಸಿಸಿ ಕೆಡೆಟ್ ವಿದ್ಯಾರ್ಥಿಗಳಿಂದ ಪಥ ಸಂಚಲನ, ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

**ಶ್ರೀ ಪದ್ಮರಾಜ ಮಹಿಳಾ ಕಾಲೇಜು:**

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಕಾಲೇಜಿನಲ್ಲಿ 75ನೇ ಗಣರಾಜ್ಯೋತ್ಸವ ಆಚರಣೆ ಮಾಡಲಾಯಿತು.

ಇದೇ ವೇಳೆ ಪದವಿ ಪ್ರಾಚಾರ್ಯ ಎಸ್.ಎಂ ಪೂಜಾರಿ, ಎಂ.ಎಸ್.ಹೈಯ್ಯಾಳಕರ, ಉಪನ್ಯಾಸಕರಾದ ಜಿ.ಎ.ನಂದಿಮಠ, ಜಿ.ಎಸ್. ಕುಲಕರ್ಣಿ, ಮಹಾಂತೇಶ ನೂಲಾನವರ, ಎಸ್.ಸಿ ದುದ್ದಗಿ, ಎಲ್.ಎಮ್ ಮಾರ್ಸನಳ್ಳಿ, ಹೇಮಾ ಕಾಸರ, ಯು.ಸಿ ಪೂಜೇರಿ, ಎ.ಎ.ಕೊಕನಿ, ಸತೀಶ ಕಕ್ಕಸಗೇರಿ, ಶಂಕರ ಕುಂಬಾರ, ವಿಜಯಲಕ್ಷ್ಮಿ ಭಜಂತ್ರಿ, ಮಂಗಳಾ ಈಳಗೇರ, ಡಿ.ಎಂ.ಪಾಟೀಲ ಸೇರಿದಂತೆ ಅನೇಕರಿದ್ದರು.

**ಬ್ಲಾಕ್ ಕಾಂಗ್ರೆಸ್ ಕಛೇರಿ:**

ಪಟ್ಟಣದ ಎಪಿಎಂಸಿಯಲ್ಲಿರುವ ಸಿಂದಗಿ ಬ್ಲಾಕ್ ಕಾಂಗ್ರೆಸ್ ಕಛೇರಿಯಲ್ಲಿ 75ನೇ ಗಣರಾಜ್ಯೋತ್ಸವ ಆವರಣೆ ಮಾಡಲಾಯಿತು.

ಇದೇ ವೇಳೆ ಬ್ಲಾಕ್ ಕಾಂಗ್ರೆಸ್ ಸಮಿತಿ ತಾಲೂಕಾಧ್ಯಕ್ಷ ಸುರೇಶ ಪೂಜಾರ, ಮಹಾನಂದ ಬಮ್ಮಣ್ಣಿ, ಡಾ.ಶಿವಾನಂದ ಹೊಸಮನಿ, ಸುನಂದಾ ಯಂಪುರೆ ಸೇರಿದಂತೆ ಕಾರ್ಯಕರ್ತರು ಇದ್ದರು.

**ತಾಲೂಕು ಸಾರ್ವಜನಿಕ ಆಸ್ಪತ್ರೆ:**

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ 75ನೇ ಗಣರಾಜ್ಯೋತ್ಸವದ ಆವರಣೆ ಮಾಡಲಾಯಿತು.

ಈ ವೇಳೆ ತಾಲೂಕು ಆರೋಗ್ಯಾಧಿಕಾರಿ ಎ.ಎ ಮಾಗಿ, ರಾಜಶೇಖರ ನರಗೋದಿ, ಡಾ.ಮಹಾಂತೇಶ ಹಿರೇಮಠ, ಎಂ.ಪಿ ಸಾಗರ, ಡಾ. ಬಡಿಗೇರ ಹಾಗೂ ಡಾ.ರಾಠೋಡ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿಗಳು ಇದ್ದರು.

**ಮಹಿಳಾ ವಸತಿ ನಿಲಯ:**

ಪಟ್ಟಣದ ಆರ್.ಡಿ.ಪಾಟೀಲ ಕಾಲೇಜಿನ ಎದುರಗಡೆಯಿರುವ ಮಹಿಳಾ ವಸತಿ ನಿಲಯದಲ್ಲಿ 75ನೇ ಗಣರಾಜ್ಯೋತ್ಸವ ಆಚರಣೆ ಮಾಡಲಾಯಿತು.

ಈ ವೇಳೆ ಸಿಡಿಪಿಒ ಶಂಭುಲಿಂಗ ಹಿರೇಮಠ, ಆಪ್ತಸಮಾಲೋಚಕಿ ಸುಜಾತಾ ಕಲಬುರ್ಗಿ, ರಶ್ಮಿ ನೂಲಾನವರ, ವಿದ್ಯಾ ದೇಸಾಯಿ ಇದ್ದರು.

**ಪ್ರೇರಣಾ ಶಾಲೆ:**

ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೇರಣಾ ಪಬ್ಲಿಕ್ ಆಂಗ್ಲ ಮಾಧ್ಯಮ ಪ್ರೌಢಶಾಲೆ ಸಿಂದಗಿ ಸಹಯೋಗದಲ್ಲಿ ಅಮೃತ ಮಹೋತ್ಸವ ಸಂಭ್ರಮದ 75ನೇ ಗಣರಾಜ್ಯೋತ್ಸವ ಆಚರಣೆ ಮಾಡಲಾಯಿತು. ಸಂಸ್ಥೆಯ ಅಧ್ಯಕ್ಷ ಆರ್.ಡಿ ಕುಲಕರ್ಣಿ, ಮುಖ್ಯ ಗುರುಮಾತೆ ಎಸ್.ಐ ಅಸ್ಕಿ, ಸಂಸ್ಥೆಯ ನಿರ್ದೇಶಕ ಪಿ.ಡಿ ಕುಲಕರ್ಣಿ, ವಿದ್ಯಾಶ್ರೀ ಅಂಬಲಗಿ, ಸತೀಶ್ ಕುಲಕರ್ಣಿ, ದ್ರಾಕ್ಷಾಯಿಣಿ ಹುಗ್ಗಿ ಸೇರಿದಂತೆ ಸಂಸ್ಥೆಯ ನಿರ್ದೇಶಕ ಮಂಡಳಿ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಂವಿಧಾನ ಎಲ್ಲ ಜಾತಿ, ಮತ, ಪಂಥಗಳ ಧರ್ಮಗ್ರಂಥ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಭಾರತದ ಸಂವಿಧಾನ ಎಲ್ಲ ಜಾತಿ, ಮತ, ಪಂಥಗಳ ಧರ್ಮಗ್ರಂಥವಾಗಿದೆ ಎಂದು ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಹೇಳಿದರು.

ಪಟ್ಟಣದ ಶಾಸಕರ ಮಾದರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಜರುಗಿದ 75ನೇ ಗಣರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿಶ್ವದಲ್ಲಿಯೇ ವಿಶೇಷವಾದ ನಮ್ಮ ಸಂವಿಧಾನದ ಮಹತ್ವ, ಧ್ಯೆಯೋದ್ಧೇಶಗಳನ್ನು ನಾವುಗಳೆಲ್ಲಾ ಅರಿಯಬೇಕಾಗಿದೆ ಎಂದರು.

ತಹಶೀಲ್ದಾರ್ ಪ್ರಕಾಶ ಸಿಂದಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ವಿಶೇಷ ಉಪನ್ಯಾಸಕರಾಗಿ ಕಲಬುರಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಮೇಶ ಮಡಿಯಾಳಕರ ಉಪನ್ಯಾಸ ನೀಡಿದರು.



ನಂತರ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಪಿಎಸ್ಸೈ ಬಸವರಾಜ ತಿಪರಡ್ಡಿ, ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚಲುವಯ್ಯ, ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಅಶೋಕ ಹೆಗಡೆ, ಸಿಆರ್‌ಪಿ ವಿಜಯಲಕ್ಷ್ಮೀ ನವಲಿ, ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಮ್.ವಾಲಿಕಾರ ಪಟ್ಟಣ ಪಂಚಾಯಿತಿ ಸದಸ್ಯರಾದ ಕಾಸುಗೌಡ ಬಿರಾದಾರ, ಕಾಶೀನಾಥ ಬಜಂತ್ರಿ, ಬಶೀರ್‌ಅಹ್ಮದ್ ಬೇಪಾರಿ, ಶಾಂತಯ್ಯ ಜಡಿಮಠ, ಸುಮಂಗಲಾ ಸೇಬೆನವರ, ಕಾಶೀನಾಥ ಜಮಾದಾರ, ನಾಮನಿರ್ದೇಶಿತ ಸದಸ್ಯರಾದ ರಾಜು ಮೆಟಗಾರ, ಹುಸೇನ್ ಕೊಕಟನೂರ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಎಂ.ಜಿ.ಯಂಕಂಚಿ, ಕಸಾಪ ತಾಲ್ಲೂಕು ಅಧ್ಯಕ್ಷ ಜಿ.ಪಿ.ಬಿರಾದಾರ, ಪ್ರಕಾಶ ಮಲ್ಲಾರಿ, ಸೋಮು ದೇವೂರ, ಕಾಸು ಕಡ್ಲೇವಾಡ ಸೇರಿದಂತೆ 12 ಕ್ಕೂ ಹೆಚ್ಚು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಪಟ್ಟಣ ಪಂಚಾಯಿತಿ ಸಿಬ್ಬಂದಿ ಇದ್ದರು.

# ವಿಶ್ವದ ಶ್ರೇಷ್ಠ ಪ್ರಜಾಪ್ರಭುತ್ವ ದೇಶ ಭಾರತ :ಐನಾಪುರ

**ಉದಯರಶ್ಮಿ ನ್ಯೂಸ್**

ತಿಕೋಟಾ: ಜಗತ್ತಿನಲ್ಲಿಯೇ ಅತ್ಯಂತ ದೊಡ್ಡದಾದ ಸಂವಿಧಾನವನ್ನು ಹೊಂದಿರುವ ಭಾರತದ ಪ್ರಜಾಪ್ರಭುತ್ವವು ಇಡೀ ಜಗತ್ತಿನಲ್ಲಿಯೇ ಅತೀ ಶ್ರೇಷ್ಠವಾಗಿದೆ. ಈ ಗಣ–ರಾಜ್ಯೋತ್ಸವ ಹಬ್ಬವು ದೇಶದ ಏಕತೆ ಮತ್ತು ಹೆಮ್ಮೆಯನ್ನು ಕಾಪಾಡಿಕೊಳ್ಳಲು ನಮಗೆಲ್ಲರಿಗೂ ಅವಕಾಶವನ್ನು ನೀಡುತ್ತದೆ. ಇದೇ ಮಂತ್ರವನ್ನು ನಾವೆಲ್ಲರೂ ಸಹ ಜಪಿಸುತ್ತಾ, ದೇಶದ ಒಳಿತಿಗಾಗಿ ದುಡಿಯಬೇಕು ಎಂದು ತಾಲ್ಲೂಕ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪುರ ಹೇಳಿದರು.

ಪಟ್ಟಣದ ತಾಲ್ಲೂಕ ಪಂಚಾಯತಿ ಕಾರ್ಯಾಲಯದಲ್ಲಿ ಜರುಗಿದ ಗಣ–ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ, ತಾಪಂ ಯೋಜನಾಧಿಕಾರಿ ಆಯೇಷಾ ಸಾಲೋಟಗಿ, ಸಹಾಯಕ ನಿರ್ದೇಶಕಿ ಶೋಭಕ್ಕ ಶಿಳೀನ, ಸಹಾಯಕ ಲೆಕ್ಕಾಧಿಕಾರಿ ವಿ.ಎಸ್.ಪುಟ್ಟಿ, ತಾಂತ್ರಿಕ ಸಂಯೋಜಕ ಇದ್ದರು.

**ವಾಡೆ ಮೈದಾನ:**

ತಾಲ್ಲೂಕ ಆಡಳಿತ ವತಿಯಿಂದ ಪಟ್ಟಣದ ವಾಡೆ ಮೈದಾನದಲ್ಲಿ ತಹಶಿಲ್ದಾರ ಪ್ರಶಾಂತ ಚನಗೊಂಡ



ಅವರಿಂದ ಧ್ವಜಾರೋಹಣ ನೆರವೇ–ರಿತು. ಈ ಸಂದರ್ಭದಲ್ಲಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

**ಕೆಜಿಎಸ್ ಶಾಲೆ:**

ಪಟ್ಟಣದ ಸರಕಾರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಎಸ್ಡಿಎಂಸಿ ಅಧ್ಯಕ್ಷ ಆರ್.ಎನ್.ಶೇಖ್ ಧ್ವಜಾರೋಹಣ ನೆರವೇರಿಸಿದರು. ಕಂಪ್ಯೂಟರ್ ಕೋಣೆ, ನಲಿಕಲಿ ಕೋಣೆಯನ್ನು ತಹಶಿಲ್ದಾರರ ಪ್ರಶಾಂತ ಚನಗೊಂಡ ಉದ್ಘಾಟಿಸಿದರು. ಶಾಲೆಗೆ □ 20 ಸಾವಿರ ದೇಣಿಗೆ ನೀಡಿದ ಎಸ್.ಎಂ.ಪಾಟೀಲ, ಆದರ್ಶ ಶಿಕ್ಷಕ ಪ್ರಶಸ್ತಿ ಪಡೆದ ಮುಖ್ಯೋಪಾಧ್ಯಾಯಿನಿ ವಿ.ಎಂ.ಸವನಳ್ಳಿ, ವಿ.ಎಸ್.ಪೂಜೇರಿ, ಸುರೇಶ ಜಾವರ ಅವರನ್ನು ಸನ್ಮಾನಿಸಲಾಯಿತು.

**ಕನಮಡಿ:**

ಸರ್ಕಾರಿ ಗಂಡು ಮಕ್ಕಳ ಶಾಲೆಯಲ್ಲಿ ಗಣರಾಜ್ಯೋತ್ಸವ ನೇರವೇರಿತು. ಮುಖ್ಯೋಪಾಧ್ಯಾಯ ಎಸ್.ಎನ್.ಕಲಾವಂತ, ಎಸ್ಡಿಎಂಸಿ ಅಧ್ಯಕ್ಷ ಸುಖದೇವ ಆಕಾಶಿ, ಉಪಾಧ್ಯಕ್ಷ, ಶಿವುಬಾಯಿ ಕುಂಬಾರ, ಸಿಬ್ಬಂದಿ ಎಸ್.ವಿ.ಕದಂ, ಆರ್.ವೈ. ಗೊಳಸಂಗಿ, ಎಸ್.ಐ.ಜಾಯಡರ್, ಎ.ಎಸ್.ಕಾಂಬಳೆ, ಗ್ರಾಮ ಪಂಚಾಯತಿ ಅಧ್ಯಕ್ಷ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.

# ಬ್ರಹ್ಮದೇವನಮಡು: ಸಂಭ್ರಮದ ಗಣರಾಜ್ಯೋತ್ಸವ

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕು ಬ್ರಹ್ಮದೇವನಮಡು ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ದ್ವಜಾರೋಹಣವನ್ನು ಎಸ್ಡಿಎಂಸಿ ಅಧ್ಯಕ್ಷ ಅಂಬ್ರುತ್ ದೊಡ್ಡಮನಿ ನೆರವೇರಿಸಿದರು.




ಚನ್ನಮಲ್ಲಯ್ಯ ಹಿರೇಮಠ, ಮಲ್ಲಿಕಾಜು9ನ ಮನಗೂಳಿ, ಬಾಲಚಂದ್ರ ಕರಿಕಲ್ಲ್, ನಿವೃತ್ತ ಶಿಕ್ಷಕ ಎಸ್.ವೈ.ಅಮರಗೋಳ, ಯಮನಪ್ಪ ಅಮರಗೋಳ, ಮುಖ್ಯಗುರು ರಘನಂದ ಉದ್ದಾರ,ನಮಂಜುನಾಥ ಸಿ.ಎಚ್.ಬಂದೇನಮಾಜ್ ಸೀತನೂರ, ಡಿ.ಕೆ.ಸೀತನೂರ, ಪತ್ರಕತ9 ಮಲ್ಲು ಕೆಂಭಾವಿ,ಮಅಲೀಮ್ ರಾಜಾಕೋಳ, ಬುಡ್ಡಾ ಏವುರ, ಅಲ್ಲಾಪಟೇಲ ಸೀತನೂರ, ಮನೋಹರ ಗುಡಿಮನಿ, ಪರಸುರಾಮ ತೊನಶ್ಯಾಳ, ಮಡಿವಾಳಪ್ಪ ಅಮರಗೋಳ, ಮುಖ್ಯ ಅಡುಗೆಯ ಶ್ರೀದೇವಿ ಕೆಂಭಾವಿ, ಸೇರಿದಂತೆ ಮತ್ತಿತ್ತರಿದ್ದರು.

ಅತಿಥಿ ಶಿಕ್ಷಕ ಅಹ್ಮದ ಸೀತನೂರ ಸ್ವಾಗತಿಸಿದರು. ಶಿಕ್ಷಕ ಮಹೇಶಕುಮಾರ ಟಿ.ಎಚ್.ವಂದಿಸಿದರು.

ಈ ವೇಳೆ ಸಮಾಜ ಸೇವಕ,ಪ್ರಥಮ ದಜೆ9 ಗುತ್ತಿಗೆದಾರ ಚಂದ್ರು ಕೆಂಭಾವಿ ಕೊಡ ಮಾಡಿದ ನೋಟ್ ಬುಕ್ ವಿದ್ಯಾಥಿ9ಗಳಿಗೆ ವಿತರಿಸಲಾಯಿತು. ವಿದ್ಯಾಥಿ9ಗಳಿಂದ ಸಾಂಸ್ಕೃತಿಕ ಕಾಯ9ಕ್ರಮಗಳು ಜರುಗಿದವು.

# ಸಿಎಂ ಆಗಮನ ಹಿನ್ನೆಲೆ ಸ್ಥಳ ಪರಿಶೀಲನೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಫೆ.2 ರಂದು ವಿವಿಧ ಕಾಮಗಾರಿಗಳ ಉದ್ಘಾಟನೆ, ನಾಗರಿಕರಿಂದ ಅಭಿನಂದನಾ ಸಮಾರಂಭ ಹಾಗೂ ಕವಡಿಮಟ್ಟಿಯ ಸಂಗೊಳ್ಳಿ ರಾಯಣ್ಣ ಮೂರ್ತಿ ಅನಾವರಣಗೊಳಿಸಲು ತಾಲೂಕಿಗೆ ಆಗಮಿಸುತ್ತಿರುವ ಹಿನ್ನೆಲೆ ಹೆಚ್ಚುವರಿ ಎಸ್.ಪಿ ಶಂಕರ ಮಾರಿಹಾಳ ಪಟ್ಟಣದ ಎಂಜಿವ್ಹಿಸಿ ಕಾಲೇಜಿನ ಹೆಲಿಪ್ಯಾಡ, ಸಮಾರಂಭದ ಆವರಣವಾದ ತಹಶೀಲ್ದಾರ ಕಚೇರಿ, ತಾಲೂಕಿನ ಕವಡಿಮಟ್ಟಿ ಗ್ರಾಮದಲ್ಲಿ ಜರುಗುವ ಕಾರ್ಯಕ್ರಮಗಳ ಸ್ಥಳ ಪರಿಶೀಲಿಸಿದರು.

ಹೆಲಿಪ್ಯಾಡ್ ನಲ್ಲಿ ಧೂಳು ಹರಡದಂತೆ ಮುಂಜಾಗೃತಾ




ಕ್ರಮಗಳನ್ನು ಪಾಲಿಸುವಂತೆ, ಹೆಲಿಪ್ಯಾಡ ನ ಡಾಂಬರೀಕರಣವನ್ನು ಮತ್ತು ಬಿಳಿ ಬಣ್ಣದ ಎಚ್ ಅಕ್ಷರಕ್ಕೆ ಬಣ್ಣ ಬಳೆಯುವಂತೆ ಸಂಬಂಧಿಸಿದ ಅಧಿಕಾ–ರಿಗಳಿಗೆ ತಿಳಿಸಿದರು. ತಹಶೀಲ್ದಾರ ಕಚೇರಿಯ ಆವರಣದಲ್ಲಿ ನಡೆಯುವ ನಾಗರೀಕರಿಂದ ಅಭಿನಂದನಾ ಸಮಾರಂಭದ ವೇಳೆ ಪೋಲೀಸ್ ಬಂದೋಬಸ್ತ್ ಕುರಿತು ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ ಅವರೊಡನೆ ಚರ್ಚಿಸಿದರು. ಪೆಂಡಾಲ್ ನ ಮಾಲೀಕಗೆ ಸ್ಟೇಜ್ ಗಟ್ಟಿಂಯಾಗಿರುವಂತೆ, ಅಲ್ಲಲ್ಲಿ ಬ್ಯಾರಿಕೇಡ್ ಅಳವಡಿಸುವಂತೆ ಸೂಚಿಸಿದರು. ಪಿಎಸ್ಐ ಸಂಜೀವ ತಿಪರೆಡ್ಡಿ ಅವರಿಗೆ ವಾಹನಗಳ ಪಾರ್ಕಿಂ–ಗ್ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ನೋಡಿಕೊಳ್ಳುವಂತೆ ಸೂಚಿಸಿದರು.

## ಕೆಬಿಜೆಎನ್ ಎಲ್ ನೂತನ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ.ಮೋಹನರಾಜ್ ಅಭಿಮತ

# ಹನಿ ನೀರಾವರಿಯಿಂದ ಸವುಳು–ಜವಳಿನ ಸಮಸ್ಯೆ ಇರದು

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಈ ಭಾಗದ ಏಳು ಜಿಲ್ಲೆಗಳ ಸುಮಾರು 6.20 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸುತ್ತಿರುವ ಆಲಮಟ್ಟಿ ಜಲಾಶಯ ನೀರಾವ–ರಿಯ ದೇಗುಲ ಎಂದು ಕೆಬಿಜೆ–ಎನ್ ಎಲ್ ನೂತನ ವ್ಯವಸ್ಥಾಪಕ ನಿರ್ದೇಶಕ, ಹಿರಿಯ ಐಎಎಸ್ ಅಧಿಕಾರಿ ಕೆ.ಪಿ.ಮೋಹನರಾಜ್ ಅಭಿಪ್ರಾಯಪಟ್ಟರು.

ಕೆಬಿಜೆಎನ್ ಎಲ್ ವತಿಯಿಂದ ಇಲ್ಲಿಯ ಮಾದರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ಧ್ವಜಾರೋಹಣ ನೆರವೇರಿಸಿ, ವಿವಿಧ ಶಾಲೆಯ ಮಕ್ಕಳಿಂದ ಪಥಸಂಚಲನದ ಗೌರವವಂದನೆ ಸ್ವೀಕರಿಸಿ ಅವರು ಮಾತನಾಡಿದರು. ಈ ಜಲಾಶಯ ಬರಪ್ರದೇಶದ ಸುಮಾರು ಏಳು ಜಿಲ್ಲೆಗಳ ಲಕ್ಷಾಂತರ ರೈತರ ಜೀವನಶೈಲಿಯನ್ನೇ ಬದಲಾಯಿಸಿದೆ ಎಂದರು.

ಮುಳವಾಡ ಏತ ನೀರಾವರಿ ಯೋಜನೆಯ ಮೂಲಕ ಸುಮಾರು 55 ಟಿಎಂಸಿ ಅಡಿಯಷ್ಟು ನೀರನ್ನು ಕಾಲುವೆಗೆ ಪಂಪಸೆಟ್ ಮೂಲಕ ಹರಿಸಲಾಗುತ್ತದೆ. ಇದರಿಂದ ಇಡೀ



ಒಂದು ನದಿಯನ್ನೇ ಪಂಪಸೆಟ್ ಮೂಲಕ ಎತ್ತಿ ಹರಿಸಿದಂತಾಗುತ್ತದೆ, ಇದರಿಂದ 2.27 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿಯಾಗಲಿದೆ ಎಂದರು. ಹನಿ ನೀರಾವರಿ ಯೋಜನೆಗಳನ್ನು ಹೆಚ್ಚೆಚ್ಚು ಜಾರಿಗೆ ಬಂದರೆ ನೀರಿನ ಹಿತಮಿತ ಉಳಿತಾಯದ ಜತೆಗೆ ಸವುಳು–ಜವುಳಿನ ಸಮಸ್ಯೆಯೂ ಬಗೆಹರಿದು, ಹೆಚ್ಚು ಪ್ರದೇಶಕ್ಕೆ ನೀರಾವರಿ ಕಲ್ಪಿಸಬಹುದು ಎಂದರು.

ನೌಕರರ ಸಂಘದ ಅಧ್ಯಕ್ಷ ಎಸ್.ಬಿ. ದಳವಾಯಿ ಅಧ್ಯಕ್ಷತೆ ವಹಿಸಿದ್ದರು. ಕೆಬಿಜೆಎನ್ ಎಲ್ ಹಿರಿಯ ಅಧಿಕಾರಿಗಳಾದ ಎಚ್. ಎನ್. ಶ್ರೀನಿವಾಸ, ಡಿ.ಬಸವರಾಜು, ಗೋವಿಂದ ರಾಠೋಡ, ವಿ.ಜಿ. ಕುಲಕರ್ಣಿ, ರವೀಂದ್ರನಾಥ ಹಜೇರಿ, ಶಿಕ್ಷಕರ ಸಂಘದ ರಾಜ್ಯ ಘಟಕದ ಪ್ರಧಾನಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ, ಶರಣಪ್ಪ ಚಲವಾದಿ, ರವಿ ಚಂದ್ರಗಿರಿಯವರ, ಸೇವಾಲಾಲ ಚವ್ಹಾಣ, ಸಹಾಯಕ ಕಮಾಂಡೆಂಟ್ ಅರುಣ ಡಿ.ವಿ, ಪಿಎಸ್ ಐ ದಿಲೀಪಕುಮಾರ, ಡಿಎಫ್ ಓ ರಾಜಣ್ಣ ನಾಗಶೆಟ್ಟಿ, ಪ್ರಾಚಾರ್ಯ ವಿ.ಶಾಂತಿ, ಪ್ರಾಚಾರ್ಯ ಪಿ.ಎ.ಹೇಮಗಿರಿಮಠ, ಎಸ್.ಐ. ಗಿಡ್ಡಪ್ಪಗೋಳ, ಜಿ.ಎಂ. ಕೊಟ್ಯಾಳ, ಮಹೇಶ ಗಾಳಪ್ಪಗೋಳ, ಬಿ.ಎಸ್. ಯರವಿನತೆಲಿಮಠ, ಎಂ.ಆರ್. ಮಕಾನದಾರ್, ಜಿ.ಸಿ.ದ್ಯಾವಣ್ಣವರ, ಕೆ.ಎನ್. ಹಿರೇಮಠ, ತನುಜಾ ಪೂಜಾರಿ ಮತ್ತೀತರರು ಇದ್ದರು. ಶಾರದಾ ಎಚ್ ಪಿಎಸ್ ಶಾಲೆ ಡಿಎಸ್ ಪ್ಲೇ ಮತ್ತು ಪಥಸಂಚಲನದಲ್ಲಿ ಪ್ರಥಮ ಸ್ಥಾನ ಪಡೆಯಿತು.

10 ಕ್ಕೂ ಹೆಚ್ಚು ವಿವಿಧ ಶಾಲೆಯ ವಿದ್ಯಾರ್ಥಿಗಳು ವಿವಿಧ ನೃತ್ಯಗಳನ್ನು ಪ್ರದರ್ಶಿಸಿದರು.

ಯಾತ್ರಿ ನಿವಾಸ ನಿರ್ಮಿಸಿ: ಆಲಮಟ್ಟಿಯಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಯಾತ್ರಿ ನಿವಾಸ ನಿರ್ಮಿಸಬೇಕು, ಆಲಮಟ್ಟಿಯ ವಿವಿಧ ಶಾಲೆಗಳಿಗೆ ಕೆಬಿಜೆಎನ್ ಎಲ್ ವತಿಯಿಂದ ಸ್ಮಾರ್ಟ್ ಕ್ಲಾಸ್ ಅಳವಡಿಸಬೇಕು, ಶಾಲೆಗಳಿಗೆ ಹೈಟೆಕ್ ಶೌಚಾಲಯ ನಿರ್ಮಿಸಬೇಕು, ಶಾಲಾ ಆಟದ ಮೈದಾನವನ್ನು ಸ್ಟೇಡಿಯಂ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂದು ಶಿಕ್ಷಕರ ಸಂಘದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ನುಗ್ಗಲಿ ಎಂಡಿ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಇದಕ್ಕೆ ತಕ್ಷಣವೇ ಸ್ಪಂದಿಸಿದ ಅವರು ಈ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಅಧೀನದ ಕೆಬಿಜೆ–ಎನ್ ಎಲ್ ಅಧಿಕಾರಿಗಳಿಗೆ ಎಂಡಿ ಮೋಹನರಾಜ ಸೂಚಿಸಿದರು.

# ನೀರಾವರಿ ಯೋಜನೆ ಜಾರಿಗೆ ಭೂಸ್ವಾಧೀನವೇ ಸವಾಲು

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ಕೃಷ್ಣಾ ಮೇಲ್ದಂಡೆ ಯೋಜನೆ (ಯುಕೆಪಿ) ಮೂರನೇ ಹಂತದ ಜಾರಿಯಿಂದ 5.20 ಲಕ್ಷ ಹೆಕ್ಟೇರ್ ಜಮೀನು ನೀರಾವ–ರಿಗೊಳಪಡಲಿದೆ, ಆದರೆ ಅದನ್ನು ಜಾರಿಗೊಳಿಸಲು ಭೂಸ್ವಾಧೀನವೇ ಸವಾಲಾಗಿದೆ ಎಂದು ಕೆಬಿಜೆಎನ್ ಎಲ್ ನೂತನ ವ್ಯವಸ್ಥಾಪಕ ನಿರ್ದೇಶಕ ಹಾಗೂ ಹಿರಿಯ ಐಎಎಸ್ ಅಧಿಕಾರಿ ಕೆ.ಪಿ. ಮೋಹನರಾಜ್ ಹೇಳಿದರು.

ಆಲಮಟ್ಟಿಗೆ ಪ್ರಥಮ ಬಾರಿಗೆ ಆಗಮಿಸಿದ ಅವರು ವಿವಿಧ ಉದ್ಯಾನಗಳಲ್ಲಿನ ಕಾಮಗಾರಿ ಪರಿಶೀಲಿಸಿ, ರಾಕ್ ಉದ್ಯಾನದಲ್ಲಿ ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು. ಭೂಸ್ವಾಧೀನ ಪ್ರಕ್ರಿಯೆಯನ್ನು ಸುಲಭಗೊಳಿಸಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧಿಕಾರಿಗಳ ಜತೆ ಚರ್ಚಿಸಿದ್ದೇನೆ, ಅವಾರ್ಡ್ ಹಂತದಲ್ಲಿರುವ ಜಮೀನಿಗೆ ಪರಿಹಾರ ಕೊಡಲು ಇರುವ ತಾಂತ್ರಿಕ ತೊಂದರೆ ಬಗೆಹರಿಸಲಾಗುವುದು ಎಂದರು. ಕಳೆದ ಮೂರು ದಿನಗಳಿಂದ ಆಲಮಟ್ಟಿಯಲ್ಲಿದ್ದು, ವಲಯವಾರು ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ್ದೇನೆ, ಯೋಜನೆ ಜಾರಿಗೆ ಉಂಟಾಗಿರುವ ತೊಡಕುಗಳನ್ನು ನಿವಾರಿಸಿ ಯಾವ ರೀತಿ ಜಾರಿಗೊಳಿಸಬೇಕು ಎಂದು ಒಂದು ಯೋಜನೆ ಹಾಗೂ ಕಾಲಮಿತಿ ಹಾಕಿಕೊಂಡು ಕಾರ್ಯೋನ್ಮುಖಗೊಳ್ಳಲಾಗುವುದು ಎಂದರು.

ನಾರಾಯಣಪುರ ಭಾಗದ ಕಾಲುವೆಗಳಿಗೆ ಅಳವಡಿಸಿರುವ ಸ್ಕಡಾ ತಂತ್ರಜ್ಞಾನವನ್ನು ಆಲಮಟ್ಟಿ ಭಾಗದ ಕೆಲ ಕಾಲುವೆಯ ಯೋಜನೆಗಳಿಗೆ ಅಳವಡಿಸಲು ಉದ್ದೇಶಿಸಲಾಗಿದೆ, ಇದರಿಂದ ಕಾಲುವೆಯ ನೀರು ಹಿತಮಿತ ಬಳಕೆಗೆ ಅವಕಾಶ ಒದಗಲಿದೆ ಎಂದರು.

ಕಾಲುವೆಗಳ ನಿರ್ವಹಣೆ:

ಈ ಬಾರಿ ಕಾಲುವೆಗೆ ನಿರ್ವಹಣೆಗಾಗಿ ಸಾಕಷ್ಟು ಕಾಲವಧಿಯಿದ್ದು, ಗುಣಮಟ್ಟದ ಕಾಮಗಾರಿ ಕೈಗೊಳ್ಳಲು ಸೂಚಿಸಲಾಗಿದೆ ಎಂದರು. ಯುಕೆಪಿ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯಲ್ಲಿ ಶೇ 20 ರಷ್ಟು ಭೂಮಿ ಸವುಳು–ಜವುಳಿಗೆ ತುತ್ತಾಗಿದೆ, ಅದನ್ನು ನಿಯಂತ್ರಿಸಲು ಹಾಗೂ ಆ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಮಥಾಳ ಹನಿನೀರಾವರಿ ಯೋಜನೆಯ ಹಾಗೆ ಕೊಪ್ಪಳ ಭಾಗದಲ್ಲಿ ಜಾರಿಗೊಳಿಸಲು ಉದ್ದೇಶಿಸಿರುವ ನೀರಾವರಿ ಯೋಜನೆಗೂ ಹನಿ ನೀರಾವರಿ ಪದ್ಧತಿ ಬಳಸಲು ಯೋಚಿಸಲಾಗಿದೆ. ಹನಿ ನೀರಾವರಿಯಿಂದ ನೀರಾವರಿ ಪ್ರದೇಶ ಹೆಚ್ಚಾಗಲಿದೆ ಎಂದರು.

ಉದ್ಯಾನಗಳ ಅಭಿವೃದ್ಧಿ:

ಆಲಮಟ್ಟಿಯಲ್ಲಿರುವ ವಿವಿಧ ಉದ್ಯಾನಗಳನ್ನು ಉತ್ತಮವಾಗಿ ನಿರ್ವಹಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಅವರು ಪ್ರವಾಸಿಗ–ರಿಗೆ ಮೂಲಭೂತ ಸೌಕರ್ಯ ಒದಗಿಸುವುದು ಪ್ರಥಮ ಆದ–ೃತೆ ಎಂದರು. ಶೌಚಾಲಯಗಳ ನಿರ್ಮಾಣಕ್ಕೆ, ಶುದ್ಧ ಕುಡಿಯುವ ನೀರು ಒದಗಿಸಲು ಆದ್ಯತೆ ನೀಡಲಾಗುವುದು, ಪಾರ್ಕಿಂಗ್ ಸಮಸ್ಯೆ ಬಗೆಹ–ರಿಸಲಾಗುವುದು ಎಂದರು.

ಆಲಮಟ್ಟಿ–ಸೀತಿಮನಿ ಮಧ್ಯೆ ರೋಪ್ ವೇ ನಿರ್ಮಿಸುವ ಪ್ರಸ್ತಾಪ ಇದ್ದು, ಈ ಬಗ್ಗೆಯೂ ಪರಿಶೀಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಮುಖ್ಯ ಎಂಜಿನಿಯರ್ ಎಚ್.ಎನ್. ಶ್ರೀನಿವಾಸ, ಡಿ.ಬಸವರಾಜ, ಗೋವಿಂದ ರಾಠೋಡ, ಡಿಎಫ್ ಓ ರಾಜಣ್ಣ ನಾಗಶೆಟ್ಟಿ, ಆರ್.ಎಫ್.ಓ. ಮಹೇಶ ಪಾಟೀಲ ಮತ್ತೀತರರು ಇದ್ದರು.

# ಧವಳಗಿ: ಅಲ್ಲಲ್ಲಿ ಗಣರಾಜೋತ್ಸವ ಆಚರಣೆ

**ಉದಯರಶ್ಮಿ ನ್ಯೂಸ್**

ಢವಳಗಿ: ಗ್ರಾಮದ ಗ್ರಾಮ ಪಂಚಾಯತಿಯಲ್ಲಿ 75ನೇ ಗಣ–ರಾಜೋತ್ಸವವನ್ನು ಆಚರಿಸಿದರು.

ಅಧ್ಯಕ್ಷೆ ಶ್ರೀಮತಿ ದ್ರಾಕ್ಷಾಯಿಣಿ ಮೇಲಿನಮನಿ ಧ್ವಜಾರೋಹಣ ನೇರವೇರಿಸಿದರು. ನಿವೃತ್ತ ಶಿಕ್ಷಕ ಎಸ್ ಎಸ್ ಪಾಟೀಲ ಹಾಗೂ ಗ್ರಾಮ ಪಂಚಾಯತಿ ಸದಸ್ಯ ಸುಭಾಷ ಗುಡಿಮನಿ ಮಾತನಾಡಿದರು.

ಇದೇ ವೇಳೆಯಲ್ಲಿ ಗ್ರಾಮದ ವತಿಯಿಂದ ನಿವೃತ್ತಿ ಸೈನಿಕ ಬಾಪೂಗೌಡ ಬಿರಾದಾರ ಮತ್ತು ಅಂತರಾಷ್ಟ್ರೀಯ ಕಬ್ಬಡ್ಡಿ ಕ್ರೀಡಾಪಟು ಎಮ್ ಕೆ ಗುಡಿಮನಿ ಅವರಿಗೆ ಸನ್ಮಾನಿಸಿ ಗೌರವಿಸಿದರು.

ಗ್ರಾಮದ ಕಸ್ತೂರಬಾ ಗಾಂಧಿ ಶಾಲೆಯಲ್ಲಿ ಶಾಲೆಯ ಭೂದಾನಿ ಬಸವಂತ್ರಾಯ ಬಿರಾದಾರ ಧ್ವಜಾರೋಹಣ ನೇರವೇರಿಸಿದರು.

ಗ್ರಾಮದ ಪ್ರಾಥಮಿಕ ಸಹಕಾರಿ ಸಂಘದ ಕಛೇರಿ ಮುಂದೆ ಅಧ್ಯಕ್ಷ ರುದ್ರಗೌಡ ಪಾಟೀಲ ಧ್ವಜಾರೋಹಣ ನೇರವೇರಿಸಿದರು.




ಗ್ರಾಮದ ಮ ಬ ಪಾಟೀಲ ಪ್ರೌಢಶಾಲೆಯಲ್ಲಿ ಶಾಲೆಯ ಅಧ್ಯಕ್ಷ ಎಸ್ ಎಸ್ ಪಾಟೀಲ, ಸರಕಾರಿ ಪ್ರಾಥ–ಮಿಕ ಶಾಲೆಯಲ್ಲಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಸುರೇಶ ಪಾಟೀಲ ಹಾಗೂ ವೀರ ಮರಣಹೊಂದಿದ ಮಡಿವಾಳಪ್ಪ ನಾಯನೇಗಿಲಿ ಅವರ ಮೂರ್ತಿಯ ಮುಂದೆ ನಿವೃತ್ತ ಸೈನಿಕರಾದ ಬಾಪೂಗೌಡ ಬಿರಾದಾರ ಅವರು ಹಾಗೂ ಶ್ರೀ ಮಡಿವಾಳೇಶ್ವರ ಉಚಿತ ಪ್ರಸಾದ ನಿಲಯದಲ್ಲಿ ಎಮ್ ಜಿ ಬಿರಾದಾರ ಅವರು ಧ್ವಜಾರೋಹಣವನ್ನು ನೆರವೇ–ರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಆನಂದ ಹೀರೆಮಠ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಎಮ್ ಕೆ ಗುಡಿಮನಿ, ಪ್ರೌಢ ಶಾಲೆ ಮುಖ್ಯಗುರು ಬಿ ಎಸ್ ಪಾಟೀಲ, ಪ್ರಾಥಮಿಕ ಶಾಲೆ ಮುಖ್ಯಗುರು ಎನ್ ಎ ತೊಂಡಿಹಾಳ, ಬಸವ ಬಾಲ ಭಾರತಿ ಶಾಲೆಯ ಮುಖ್ಯಗುರು ರಮೇಶ ಮೂಲಿಮನಿ ಹಾಗೂ ಕಸ್ತೂರಬಾ ಶಾಲೆಯ ಮುಖ್ಯ ಗುರುಮಾತೆ ಶಾರದಾ ಸಜ್ಜನ, ಸೋಮಶೇಖರ ಗಬಸಾವಳಗಿ, ಸುನೀಲಗೌಡ ಬಿರಾದಾರ, ಶಾಂತು ಹೊಸಮನಿ ಸೇರಿದಂತೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಇದ್ದರು.